RNI: KARKAN\2019\78042



ಸಂಪಾದಕರು : ಸಿ.ಎಸ್.ಸಮಗಂಡಿ.

# ಸತ್ಯಮಿಥ್ಯ

ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

Satyamithi Kannada Daily Morning

ಚನ್ನು ಮೆನ್ಸ್‌ವೇರ್
ಗಜೇಂದ್ರಗಡ-582114.
ಸೆಲ್ : 9986982482, 9686165708

ಹುಲಿಬೀರ ಉತ್ತರ ಕರ್ನಾಟಕ ಸೊಗಡಿನ ಹಳ್ಳಿ ಬದುಕಿನ ಜೀವಂತ ಕಾವ್ಯ ಹಂದರ » 2
ನಿಮ್ಮ ಗ್ರಾಮದಲ್ಲಿ ಕೆಲಸ ಬೇಕಿದ್ದರೆ ಗ್ರಾಪಂಗೆ ನಮೂನೆ-6 ಸಲ್ಲಿಸಿ » 3
ಜನರ ಬಾಗಿಲಿಗೆ ಸರ್ಕಾರ; ಸಮಸ್ಯೆಗಳಿಗೆ ತ್ವರಿತ ಪರಿಹಾರ » 4

ಸಂಪುಟ(Volume): 1 ಸಂಚಿಕೆ (Issue): 84 ● ಪುಟ (Page): 4 ● ದರ: Rs. 4 ಮಂಗಳವಾರ 6 ಅಕ್ಟೋಬರ್ 2026 ● 6 OCTOBER 2026 ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ

## ಮುಂದಿನ ಚುನಾವಣೆಯಲ್ಲೂ ಬಿಜೆಪಿ –ಜೆಡಿಎಸ್ ಮೈತ್ರಿ: ಯಡಿಯೂರಪ್ಪ

**ಸತ್ಯಮಿಥ್ಯ ಸುದ್ದಿಮೂಲ ಕಲಬುರಗಿ:** ರಾಜ್ಯದಲ್ಲಿ ಮುಂಬರುವ ಎಲ್ಲಾ ಚುನಾವಣೆಗಳನ್ನು ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಮಾಡಿಕೊಂಡು ಒಗ್ಗಟ್ಟಾಗಿ ಎದುರಿಸಲಿವೆ ಮತ್ತು 2028ರ ವಿಧಾನಸಭೆ ಚುನಾವಣೆಯಲ್ಲಿ ಮೈತ್ರಿಕೂಟ ಅಧಿಕಾರಕ್ಕೆ ಬರಲಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಪಕ್ಷದ ಅಭ್ಯರ್ಥಿ ಶಶಿಲ್ ನಮೋಶಿ ನಾಮಪತ್ರ ಸಲ್ಲಿಕೆ ಹಿನ್ನೆಲೆಯಲ್ಲಿ ಕಲಬುರಗಿಗೆ ಆಗಮಿಸಿದ್ದ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರದ ಆಡಳಿತದಿಂದ ಜನರು ಬೇಸತ್ತಿದ್ದು, ಬದಲಾವಣೆಯನ್ನು ಬಯಸುತ್ತಿದ್ದಾರೆ. ಜನರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಸರ್ಕಾರ ವಿಫಲವಾಗಿದ್ದು, ಆಡಳಿತ ವೈಫಲ್ಯದಿಂದ ಜನರಲ್ಲಿ ಅಸಮಾಧಾನ ಹೆಚ್ಚಾಗಿದೆ ಎಂದು ಆರೋಪಿಸಿದರು.

**ಸಿಎಂಅಭ್ಯರ್ಥಿತೀರ್ಮಾನಚುನಾವಣೆಬಳಿಕ:**ಹೆಚ್.ಡಿ.ಕುಮಾರಸ್ವಾಮಿ ಅವರು ಮೈತ್ರಿ ಸರ್ಕಾರದ ಮುಂದಿನ ಸಿಎಂ ಅಭ್ಯರ್ಥಿ ಎನ್ನುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಬಿಜೆಪಿ–ಜೆಡಿಎಸ್ ಮೈತ್ರಿಕೂಟ ಅಧಿಕಾರಕ್ಕೆ ಬರಲಿ, ನಮ್ಮ ಗಮನವೆಲ್ಲ ಸದ್ಯಕ್ಕೆ ಆ ಕಡೆಯಿದೆ. ವಿಧಾನಸಭೆ ಚುನಾವಣೆ ಬಳಿಕ ಯಾರು ಸಿಎಂ ಆಗಬೇಕು ಎಂಬುದು ಆಮೇಲೆ ತೀರ್ಮಾನವಾಗುತ್ತದೆ. ಚುನಾವಣೆ ಬಳಿಕ ಯಾರು ಸಿಎಂ ಎಂಬುವುದನ್ನುಈಗಾಗಲೇವಿಜಯೇಂದ್ರಸ್ಪಷ್ಟಪಡಿಸಿದ್ದಾರೆ.ಮೊದಲು ಚುನಾವಣೆಯನ್ನು ಎದುರಿಸುತ್ತೇವೆ. ನಮ್ಮ ಬಳಿ ಬಿಜೆಪಿ–ಜೆಡಿಎಸ್ ಎರಡೂ ಒಂದೇ ಎಂಬ ಅಭಿಪ್ರಾಯವಿದೆ. ಸಿಎಂ ಯಾರಾಗಬೇಕು ಎನ್ನುವುದು ನಂತರ ತೀರ್ಮಾನವಾಗುತ್ತದೆ ಎಂದರು.

**ಡಿ.ಕೆ. ಶಿವಕುಮಾರ್ ಭ್ರಮೆಯಲ್ಲಿದ್ದಾರೆ:** 2028ರಲ್ಲಿ ಮತ್ತೆ ಕಾಂಗ್ರೆಸ್



ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂಬ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೇಳಿಕೆಗೆ ತಿರುಗೇಟು ನೀಡಿದ ಯಡಿಯೂರಪ್ಪ, "ಡಿ.ಕೆ. ಶಿವಕುಮಾರ್ ಭ್ರಮೆಯಲ್ಲಿದ್ದಾರೆ ಇರಲಿ, ಅವರ ಭ್ರಮೆಗೆ ನಮ್ಮ ಅಭ್ಯಂತರವೇನೂ ಇಲ್ಲ. ಹಣ, ಹೆಂಡದ ಬಲದ ಮೇಲೆ ಚುನಾವಣೆಯಲ್ಲಿ ಗೆಲ್ಲುವ ಕಾಲ ಹೋಗಿದೆ. ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ. ಈ ಸರ್ಕಾರಕ್ಕೆ ಪಾಠ ಕಲಿಸಬೇಕೆಂದರೆ ಈ ಚುನಾವಣೆಯಲ್ಲಿ ಸೋಲಿಸಬೇಕಿದೆ. ಈ ರಾಜ್ಯದ ಮತದಾರರು ಜಾಗೃತರಾಗಿದ್ದಾರೆ. ಬರುವ ಚುನಾವಣೆಯಲ್ಲಿ ಸ್ಪಷ್ಟ ಬಹುಮತ ಪಡೆದು ರಾಜ್ಯದಲ್ಲಿ ಮೈತ್ರಿ ಸರ್ಕಾರ ನಡೆಸುತ್ತೇವೆ" ಎಂದು ಹೇಳಿದರು.

ಇದೇ ವೇಳೆ, ದೇಶದ ಹೆಮ್ಮೆಯ ಪೈಲಟ್ ಸ್ಮಿತ್ 172 ಜನರ ರಕ್ಷಣೆ ಮಾಡಿದ್ದಾರೆ. ಸ್ಮಿತ್ ಅವರಿಗೆ 'ಭಾರತ ರತ್ನ' ನೀಡಬೇಕೆಂದು ಪ್ರಧಾನಿಯವರಿಗೂ ಹಾಗೂ ರಾಷ್ಟ್ರಪತಿಗಳಿಗೂ ಮನವಿ ಮಾಡಿಕೊಳ್ಳುವುದಾಗಿ ಯಡಿಯೂರಪ್ಪ ತಿಳಿಸಿದರು.

## ನಕಲಿ ಮತಗಳಿಂದ ಗೆಲ್ಲುತ್ತಿದ್ದ ಕಾಂಗ್ರೆಸ್‌ಗೆ ಎಸ್‌ಐಆರ್‌ನಿಂದ ತೊಂದರೆ: ಬೊಮ್ಮಾಯಿ



**ಸತ್ಯಮಿಥ್ಯ ಸುದ್ದಿಮೂಲ ಗದಗ :** ಕಾಂಗ್ರೆಸ್ ಪಕ್ಷದವರು ಕಳೆದ 20 ವರ್ಷಗಳಿಂದ ನಕಲಿ ಮತಗಳನ್ನು ಹಾಕಿಸಿಕೊಂಡು ಆಯ್ಕೆಯಾಗುತ್ತಿದ್ದರು. ಒಂದೇ ವ್ಯಕ್ತಿ ಎರಡು ಕಡೆ ಮತಗಳನ್ನು ಹಾಕಿಸುವುದು ಹಾಗೂ ಸತ್ತವರ ಹೆಸರಿನಲ್ಲಿ ಮತಗಳನ್ನು ಹಾಕಿಸಿಕೊಳ್ಳುವುದು ಮಾಡುತ್ತಿದ್ದರು. ಎಸ್‌ಐಆರ್‌ನಿಂದ ಈಗ ಅವರಿಗೆ ತೊಂದರೆಯಾಗಿದೆ. ಹೀಗಾಗಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ನಕಲಿಮತಗಳರಕ್ಷಣೆಗಾಗಿಚುನಾವಣಾಧಿಕಾರಿಕಚೇರಿ ಎದುರು ಧರಣಿ ನಡೆಸುವ ನಾಟಕವಾಡುತ್ತಿದ್ದಾರೆ' ಎಂದು ಸಂಸದ ಬಸವರಾಜ ಬೊಮ್ಮಾಯಿ ಟೀಕಿಸಿದರು.

'ರಾಜ್ಯದಲ್ಲಿಎಸ್‌ಐಆರ್‌ಪ್ರಕ್ರಿಯೆಆರಂಭದಿಂದಲೂಸರಳವಾಗಿನಡೆದಿದೆ. ಪ್ರಾರಂಭದಲ್ಲಿ ಕಾಂಗ್ರೆಸ್‌ನವರು ಮಸೀದಿಯಲ್ಲಿ ಅರ್ಜಿ ತುಂಬಿಸುತ್ತಿದ್ದರು. ನಾವು ಅದನ್ನು ವಿರೋಧಿಸಿದ್ದೆವು. ಅಕ್ಟೋಬರ್ 8ರಂದು ಕರಡು ಮತಪಟ್ಟಿ ನೀಡಲಾಗಿದೆ. ಕಾಂಗ್ರೆಸ್‌ನವರು ಚುನಾವಣಾಧಿಕಾರಿ ಕಚೇರಿ ಮುಂದೆ ಧರಣಿ ನಡೆಸಿ ಗೊಂದಲ ಸೃಷ್ಟಿಸಿದ್ದಾರೆ' ಎಂದರು.

ನಮ್ಮ ಪಕ್ಷದ ಪ್ರಮುಖರು ಚುನಾವಣಾಧಿಕಾರಿಯನ್ನು ಭೇಟಿ ಮಾಡಿ ಮನವಿ ಮಾಡಿದ್ದಾರೆ. ಕಾನೂನು ಪ್ರಕಾರ ಎಲ್ಲವೂ ನಡೆಯುತ್ತಿರುವುದಾಗಿ ಹೇಳಿದ್ದಾರೆ. ಇದರ ವಿರುದ್ಧ ಪ್ರಕರಣ ದಾಖಲಿಸುವ ಅಧಿಕಾರ ರಾಜ್ಯ ಸರ್ಕಾರಕ್ಕಿಲ್ಲವೆಂದುತಿಳಿಸಿದ್ದಾರೆ.ಇದುಸಂಪೂರ್ಣವಾಗಿ ಚುನಾವಣಾ ಅಧಿಕಾರಿಗಳು ಮಾಡಬೇಕಾದ ಕೆಲಸ. ಕಾನೂನಿನ ಪ್ರಕಾರ ಅರ್ಹರ ಮತಗಳು ಮಾತ್ರ ಸುರಕ್ಷಿತ. ಅನರ್ಹರ ಮತಗಳನ್ನು ತೆಗೆದುಹಾಕಬೇಕೆಂಬುದು ಸ್ಪಷ್ಟ ನಿಲುವು' ಎಂದು ಹೇಳಿದರು.

'ಕಾಂಗ್ರೆಸ್‌ನವರು ಎಲ್ಲ ಕಡೆ ಸೋತಿದ್ದಾರೆ. ಅದಕ್ಕಾಗಿ ಕುಂಟು ನೆಪ ಹೇಳುತ್ತಿದ್ದಾರೆ. ಅವರ ಪಕ್ಷ ಏಕೆ ಸೋತಿದೆ ಎಂಬುದರ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಲಿ. ಕಾಂಗ್ರೆಸ್ ಹಾಗೂ ಅವರ ಮಿತ್ರ ಪಕ್ಷದವರಿಗೆ, ದೇಶದ ಅಭಿವೃದ್ಧಿ ಸಹಿಸಿಕೊಳ್ಳಲು ಆಗುತ್ತಿಲ್ಲ. ದೇಶದಲ್ಲಿ ದಂಗೆ ಎಬ್ಬಿಸಬೇಕೆಂದು ಬಯಸುತ್ತಿದ್ದಾರೆ. ಅದಕ್ಕೆ ದೇಶದ ಜನರು ಸೊಪ್ಪು ಹಾಕುವುದಿಲ್ಲ' ಎಂದರು.

## ಮುಳಗುಂದ ಸುತ್ತ ವರ್ತುಲ ರಸ್ತೆ ನಿರ್ಮಾಣಕ್ಕೆ ಅಧಿಸೂಚನೆ

**ಸತ್ಯಮಿಥ್ಯ ಸುದ್ದಿಮೂಲ ಮುಳಗುಂದ:** ಪಟ್ಟಣವನ್ನು ಕೇಂದ್ರವಾಗಿಟ್ಟುಕೊಂಡು ಸುತ್ತಲಿನ ಗ್ರಾಮಗಳನ್ನು ಒಳಗೊಂಡು ವರ್ತುಲ ರಸ್ತೆ ನಿರ್ಮಾಣಕ್ಕೆ ರಾಜ್ಯ ಸರ್ಕಾರದ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯು ಆಗಸ್ಟ್ 29ರಂದು ಅಧಿಕೃತ ಅಧಿಸೂಚನೆ ಹೊರಡಿಸಿದೆ.

ರಾಜ್ಯದ 108 ಸಣ್ಣ ಹಾಗೂ ಮಧ್ಯಮ ಪಟ್ಟಣಗಳಲ್ಲಿ ಜಿಐಎಸ್ ಆಧಾರಿತ ರೋಡ್ ನೆಟ್‌ವರ್ಕಿಂಗ್ ಗ್ರಿಡ್ ಪ್ಲಾನ್ ಅಡಿ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಸರ್ಕಾರ ಕ್ರಮ ಕೈಗೊಂಡಿದೆ.

ಗದಗ ಜಿಲ್ಲೆಯ ಮುಳಗುಂದ, ಮುಂಡರಗಿ, ನರೇಗಲ್ ಹಾಗೂ ಗಜೇಂದ್ರಗಡ ಪಟ್ಟಣಗಳಿಗೆ ವರ್ತುಲ ರಸ್ತೆಗಳ ನಿರ್ಮಾಣವಾಗಲಿವೆ. ನಿಯೋಜಿತ ವರ್ತುಲ ರಸ್ತೆಯು 100 ಅಡಿ ಅಗಲ, ಎರಡು ಬದಿ ಎರಡು ಕಿ.ಮೀ ಪ್ರಭಾ ವಲಯವನ್ನು ಒಳಗೊಳ್ಳಲಿದೆ.

ಮುಳಗುಂದ ಸಮೀಪದ ಅಸುಂಡಿ, ಮಲ್ಲಸಮುದ್ರ, ಶಿರಹಟ್ಟಿ, ಖಾನಾಪೂರ, ಮಾಗಡಿ, ಹೋಳಲಾಪೂರ, ಯಳವತ್ತಿ, ಚಿಂಚಲಿ ಗ್ರಾಮಗಳ ವ್ಯಾಪ್ತಿಯಲ್ಲಿ ವರ್ತುಲ ರಸ್ತೆ ನಿರ್ಮಾಣಕ್ಕಾಗಿ ಸರ್ವೇ ನಂಬರ್ ಗುರುತಿಸಲಾಗಿದ್ದು, ಭೂಸ್ವಾಧೀನ ಇನ್ನಷ್ಟೇ ಆಗಬೇಕಿದೆ.ಈ ಕುರಿತು ಇಲ್ಲಿನ ಪಟ್ಟಣ ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಸೂಚನಾ ಫಲಕದಲ್ಲಿ ವರ್ತುಲ ರಸ್ತೆಯ ನಕ್ಷೆ ಹಾಗೂ ನಿಬಂಧನೆಗಳನ್ನು ಒಳಗೊಂಡು ಸರ್ಕಾರದ ಆದೇಶ ಪ್ರತಿಗಳನ್ನು ಪ್ರಕಟಿಸಲಾಗಿದೆ.



ವರ್ತುಲ ರಸ್ತೆ ನಿರ್ಮಿಸುವ ಕುರಿತು ಸಲಹೆ, ಸೂಚನೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಸಾರ್ವಜನಿಕರು ನಗರ ಹಾಗೂ ಗ್ರಾಮಾಂತರ ಯೋಜನಾ ಇಲಾಖೆಗೆ ಲಿಖಿತವಾಗಿ ದೂರು ಸಲ್ಲಿಸಬಹುದು ಎಂದು ತಿಳಿಸಲಾಗಿದೆ.

## ರೇಡಿಯಂಟ್ ವರ್ಲ್ಡ್ ಪ್ಯಾರಾ ಕ್ರಿಕೆಟ್: ಮಹಾಂತೇಶ ಆಯ್ಕೆ

**ವಿಜಯಪುರ (ಮುದ್ದೇಬಿಹಾಳ):** ಭಾರತೀಯ ದಿವ್ಯಾಂಗ್ ಕ್ರಿಕೆಟ್ ನಿಯಂತ್ರಣ ಮಂಡಳಿ ಹಾಗೂ ಫಿಟ್ ದಿವ್ಯಾಂಗ್ ಕ್ರಿಕೆಟ್ ಮಂಡಳಿ ಆಫ್ ಇಂಡಿಯಾ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿರುವ ಪ್ರತಿಷ್ಠಿತ "ರೇಡಿಯಂಟ್ ವರ್ಲ್ಡ್ ಪ್ಯಾರಾ ಕ್ರಿಕೆಟ್ ಲೀಗ್ – 2026" ಟೂರ್ನಿಗೆ ತಾಲೂಕಿನ ಪ್ರತಿಭೆಯೊಬ್ಬರು ಆಯ್ಕೆಯಾಗುವ ಮೂಲಕ ಗ್ರಾಮೀಣ ಭಾಗಕ್ಕೆ ಕೀರ್ತಿ ತಂದಿದ್ದಾರೆ.



ಉತ್ತರ ಪ್ರದೇಶದ ಆಗ್ರಾದಲ್ಲಿ ಸೆಪ್ಟೆಂಬರ್ 6ರಿಂದ 11ರವರೆಗೆ ನಡೆಯಲಿರುವ ಈ ಸರಣಿಗೆ ಬಸವನ ಬಾಗೇವಾಡಿ ತಾಲೂಕಿನ ಅಂಬಳನೂರ ಗ್ರಾಮದ ನಿವಾಸಿ ಮಹಾಂತೇಶ ವೀರಬಸಪ್ಪ ಚಲವಾದಿ ಅವರು ಆಲ್ ರೌಂಡರ್ ಆಟಗಾರರಾಗಿ ಆಯ್ಕೆಯಾಗಿದ್ದಾರೆ. ಮಹಾಂತೇಶ ಅವರು ಪ್ರಸ್ತುತ ಮುದ್ದೇಬಿಹಾಳ ತಾಲೂಕಿನ ಢವಳಗಿ ಗ್ರಾಮದಲ್ಲಿರುವ 'ಡಿಸ್ಟ್ರಿಕ್ಟ್ ಸೆಂಟ್ರಲ್ ಕೊ–ಆಪರೇಟಿವ್' ಬ್ಯಾಂಕ್ ಶಾಖೆಯಲ್ಲಿ ಸಿಪಾಯಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಕ್ರೀಡಾ ಶ್ರೇಷ್ಠತೆ ಹಾಗೂ ಸಾಧನೆಯನ್ನು ಗುರುತಿಸಿ ಈ ಕ್ರಿಕೆಟ್ ಲೀಗ್‌ಗೆ ಆಯ್ಕೆ ಮಾಡಲಾಗಿದ್ದು, ಈ ಕುರಿತು ಫಿಟ್ ದಿವ್ಯಾಂಗ್ ಕ್ರಿಕೆಟ್ ಮಂಡಳಿ ಆಫ್ ಇಂಡಿಯಾದ ಕಾರ್ಯದರ್ಶಿಗಳು ಅಧಿಕೃತ ಆದೇಶ ಹೊರಡಿಸಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬ್ಯಾಂಕ್ ನೌಕರರಾಗಿಯೂ, ಮತ್ತೊಂದೆಡೆ ಕ್ರೀಡಾಪಟುವಾಗಿಯೂ ಸಾಧನೆ ಮಾಡುತ್ತಿರುವ ಮಹಾಂತೇಶ ಅವರ ಈ ಸಾಧನೆಗೆ ಢವಳಗಿಯ ಬ್ಯಾಂಕ್ ಆಡಳಿತ ಮಂಡಳಿ, ಸಹೋದ್ಯೋಗಿಗಳು, ಅಂಬಳನೂರ ಗ್ರಾಮಸ್ಥರು ಹಾಗೂ ಮುದ್ದೇಬಿಹಾಳ ತಾಲೂಕಿನ ಸಾರ್ವಜನಿಕರು ಹರ್ಷ ವ್ಯಕ್ತಪಡಿಸಿ, ಶುಭ ಹಾರೈಸಿದ್ದಾರೆ.

## ಮಹರ್ಷಿ ವಾಲ್ಮೀಕಿ ಜಯಂತಿ 25ರ ಬದಲು 26ರಂದು ಆಚರಣೆ, ಅಂದು ಸರ್ಕಾರಿ ರಜೆ

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಜಯಂತಿಯ ಸಾರ್ವತ್ರಿಕ ರಜೆ ದಿನಾಂಕವನ್ನು ಬದಲಾಯಿಸಿ ಕರ್ನಾಟಕ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ. ಈ ಹಿಂದೆ ನಿಗದಿಪಡಿಸಲಾಗಿದ್ದ ದಿನಾಂಕದ ಬದಲಾಗಿ, ಅಕ್ಟೋಬರ್ 26ರ ಸೋಮವಾರದಂದು ವಾಲ್ಮೀಕಿ ಜಯಂತಿ ಆಚರಿಸಲು ಹಾಗೂ ಅಂದು ಸಾರ್ವತ್ರಿಕ ರಜೆ ನೀಡಲು ಸರ್ಕಾರ ತೀರ್ಮಾನಿಸಿದೆ.



ಸರ್ಕಾರದಹಿಂದಿನಅಧಿಸೂಚನೆಯನ್ವಯ 2026ನೇ ಸಾಲಿನ ಸಾರ್ವತ್ರಿಕ ರಜಾ ದಿನಗಳ ಪಟ್ಟಿಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು 2026ರ ಅಕ್ಟೋಬರ್ 25ರ ಭಾನುವಾರದಂದು ಘೋಷಿಸಲಾಗಿತ್ತು. ಆದರೆ, ವಾಲ್ಮೀಕಿ ಜಯಂತಿಯನ್ನು 'ಶೀಗಿ ಹುಣ್ಣಿಮೆ' ದಿನದಂದೇ ಆಚರಿಸುವ ಸಂಪ್ರದಾಯ ವಿರುವುದರಿಂದ, ಅಕ್ಟೋಬರ್ 26ರ ಸೋಮವಾರದಂದು ಶೀಗಿ ಹುಣ್ಣಿಮೆ ಬಂದ ಹಿನ್ನೆಲೆಯಲ್ಲಿ ಅಂದೇ ಜಯಂತಿಯನ್ನು ಆಚರಿಸಲು ಮತ್ತು ಸಾರ್ವತ್ರಿಕ ರಜೆ ನೀಡಲು ಆದೇಶಿಸಲಾಗಿದೆ.

**ಬ್ಯಾಂಕ್‌ಗಳಿಗೂ ರಜೆ ಅನ್ವಯ:** ಈ ರಜೆಯು ನೆಗೋಶಿಯೇಬಲ್ ಇನ್ಸ್ಟ್ರುಮೆಂಟ್ ಆಕ್ಟ್, 1881ರ ಸೆಕ್ಷನ್ 25ರ ವಿವರಣೆಯನ್ವಯವೂ ಅನ್ವಯವಾಗಲಿದ್ದು, ಅಕ್ಟೋಬರ್ 26ರ ಸೋಮವಾರದಂದು ರಾಜ್ಯದ ಸರ್ಕಾರಿ ಕಚೇರಿಗಳು, ಶಾಲೆ–ಕಾಲೇಜುಗಳ ಜೊತೆಗೆ ಬ್ಯಾಂಕ್‌ಗಳಿಗೂ ಸಾರ್ವತ್ರಿಕ ರಜೆ ಇರಲಿದೆ.

**ಅಧಿಕೃತ ಆದೇಶ:** ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ರವಿಕುಮಾರ್ ಎಸ್.ಅವರು ಈ ಸಂಬಂಧ ಅಧಿಸೂಚನೆ ಹೊರಡಿಸಿದ್ದಾರೆ.

# ಕೊಪ್ಪಳ ಜಿಲ್ಲೆಯಲ್ಲಿ ಬರ ಹಾನಿ ಪರಿಶೀಲನೆ

## ರೈತರ ಜಮೀನುಗಳಿಗೆ ಕೇಂದ್ರ ಬರ ಅಧ್ಯಯನ ತಂಡದಿಂದ ಭೇಟಿ | ಬೆಳೆ ಸ್ಥಿತಿ ದಾಖಲು

**ಕೊಪ್ಪಳ :** ರಾಜ್ಯದಲ್ಲಿ ತಲೆದೋರಿರುವ ತೀವ್ರ ಖಾರಿಫ್ ಬರ ಪರಿಸ್ಥಿತಿಯ ಅಧ್ಯಯನಕ್ಕಾಗಿ ಕೇಂದ್ರ ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳ ತಂಡ (ಐಎಂಸಿಟಿ) ಅಕ್ಟೋಬರ್ 05ರಂದು ಕೊಪ್ಪಳ ಜಿಲ್ಲೆಗೆ ಭೇಟಿ ನೀಡಿ, ಬೆಳೆ ಹಾನಿಯನ್ನು ವಿಸ್ತೃತವಾಗಿ ಪರಿಶೀಲಿಸಿತು.

ಕೇಂದ್ರ ಸರ್ಕಾರದ ನಿರ್ದೇಶಕರಾದ ಡಾ. ಮನ್ ಸಿಂಗ್ ಅವರ ನೇತೃತ್ವದ, ಅಧೀನ ಕಾರ್ಯದರ್ಶಿಗಳಾದ ಪಾರ್ಥ ಪಾಲ್ ಹಾಗೂ ರಾಕೇಶ್ ಕುಮಾರ್ ಅವರನ್ನೊಳಗೊಂಡ ಅಧಿಕಾರಿಗಳ ತಂಡವು ಜಿಲ್ಲೆಯ ವಿವಿಧ ಬರಪೀಡಿತ ಪ್ರದೇಶಗಳಿಗೆ ತೆರಳಿ ಪರಿಶೀಲನೆ ನಡೆಸಿತು.

ತಂಡವು ಜಿಲ್ಲೆಯ ಕನಕಗಿರಿ ತಾಲೂಕಿನ ಹುಲಿಹೈದರ್ ಹೋಬಳಿಯ ಹನುಮನಾಳ ಗ್ರಾಮಕ್ಕೆ ಭೇಟಿ ನೀಡಿ, ಮಳೆಯಿಲ್ಲದೆ ಹಾನಿಗೊಳಗಾದ ಬೆಳೆಗಳನ್ನು ಖುದ್ದು ವೀಕ್ಷಿಸಿತು. ಹನುಮನಾಳ ಗ್ರಾಮದ ಬಸವರಾಜ ತಂದೆ ಲಿಂಗನಗೌಡ ಅವರ ಹೊಲದಲ್ಲಿ ಹಾನಿಗೊಳಗಾದ ತೆ-ೂಗರಿ ಬೆಳೆ ಮತ್ತು ರೈತ ಮೂಖಪ್ಪ ತಂದೆ ಕರಿಯಪ್ಪ ಅವರ ಜಮೀನಿನಲ್ಲಿ ನಷ್ಟವಾದ ಸಜ್ಜೆ ಬೆಳೆಯನ್ನು ಪರಿಶೀಲಿಸಿದ ಕೇಂದ್ರ ಬರ ಅಧ್ಯಯನ ತಂಡದ ಅಧಿಕಾರಿಗಳು, ಮಳೆ ಕೊರತೆ ಮತ್ತು ಇಳುವರಿ ಕುಸಿತದ ಬಗ್ಗೆ ರೈತರಿಂದ ನೇರವಾಗಿ ಮಾಹಿತಿ ಪಡೆದುಕೊಂಡರು.

ಇದೇ ವೇಳೆ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ್ ಬಿ. ಇಟ್ನಾಳ ಅವರು ಮಾತನಾಡಿ, ರೈತರು ಹೇಳಿದ ಪ್ರತಿಯೊಂದು ಸಮಸ್ಯೆ ಮತ್ತು ಬೇಡಿಕೆಗಳನ್ನು ಕನ್ನಡದಿಂದ ಇಂಗ್ಲಿಷ್ ಭಾಷೆಗೆ ಅನುವಾದಿಸಿ, ಕೇಂದ್ರ ಬರ ಅಧ್ಯಯನ ತಂಡಕ್ಕೆ ತಿಳಿಸಿಕೊಟ್ಟರು. ಸಂಬಂಧಪಟ್ಟ ಅಧಿಕಾರಿಗಳು ಮಳೆ ಕೊರತೆ, ಬೆಳೆ ಹಾನಿಯ ಪ್ರಮಾಣ ಮತ್ತು ರೈತರು ಎದುರಿಸುತ್ತಿರುವ ಸಂಕಷ್ಟಗಳ ಕುರಿತು ಕೇಂದ್ರ ಬರ ಅಧ್ಯಯನ ತಂಡಕ್ಕೆ ವಾಸ್ತವ ಸ್ಥಿತಿ ಮನವರಿಕೆ ಮಾಡಿದರು.





**ಕೇಂದ್ರ ಬರ ಅಧ್ಯಯನ ತಂಡದ ಮುಂದೆ ರೈತರ ಅಳಲು:** ಬರ ಪರಿಸ್ಥಿತಿಯ ನೈಜ ಸ್ಥಿತಿಗತಿ ಪರಿಶೀಲನೆಗೆ ಆಗಮಿಸಿದ್ದ ಕೇಂದ್ರ ಬರ ಅಧ್ಯಯನ ತಂಡದ ಮುಂದೆ ರೈತರು ತಮ್ಮ ಸಂಕಷ್ಟಗಳನ್ನು ತೋಡಿಕೊಂಡರು. ಮಳೆಯಿಲ್ಲದೆ ಬೆಳೆಗಳು ಸಂಪೂರ್ಣ ನಾಶವಾಗಿದ್ದು, ತೀವ್ರ ಆರ್ಥಿಕ ಸಂಕಷ್ಟ ಎದುರಾಗಿದೆ ಎಂದು ಅಧಿಕಾರಿಗಳ ಎದುರು ರೈತರು ತಮ್ಮ ಅಳಲು ವ್ಯಕ್ತಪಡಿಸಿದರು. ಕಳೆದ ಹಲವು ತಿಂಗಳುಗಳಿಂದ ಮಳೆಯಿಲ್ಲದೆ ತೊಗರಿ, ಹತ್ತಿ, ಭತ್ತ, ಜೋಳ ಮುಂತಾದ ಬೆಳೆಗಳು ಒಣಗಿ ಹೋಗಿವೆ. ಒಂದು ಎಕರೆಗೆ ಕನಿಷ್ಠ 40 ರಿಂದ 50 ಸಾವಿರ ರೂ.ಗಳು ಖರ್ಚು ಆಗಿವೆ. ಬೋರ್‌ವೆಲ್‌ಗಳಲ್ಲಿ ನೀರಿನ ಪ್ರಮಾಣ ಗಣನೀಯವಾಗಿ ಕುಸಿದಿದ್ದು, ಕೃಷಿಗೆ ಮಾತ್ರವಲ್ಲದೆ ಕುಡಿಯುವ ನೀರಿಗೂ ಸಮಸ್ಯೆ ಎದುರಾಗುತ್ತಿದೆ. ಜಾನುವಾರುಗಳಿಗೆ ಮೇವು ಮತ್ತು ನೀರಿನ ಕೊರತೆ ಉಂಟಾಗುತ್ತಿರುವುದರಿಂದ ತಕ್ಷಣವೇ ಗ್ರಾಮಗಳಲ್ಲಿ ಗೋಶಾಲೆಗಳನ್ನು ತೆರೆಯಬೇಕು ಮತ್ತು ಮೇವು ಬ್ಯಾಂಕ್ ಸ್ಥಾಪನೆ ಮಾಡಬೇಕು ಎಂದು ರೈತರು ಮನವಿ ಮಾಡಿದರು.

ಸಂಕಷ್ಟದಲ್ಲಿರುವ ಅನ್ನದಾತರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರವು ತ್ವರಿತವಾಗಿ ಸ್ಪಂದಿಸಬೇಕು. ಪ್ರತಿ ಎಕರೆಗೆ ಕನಿಷ್ಠ ರೂ. 50,000 ಪರಿಹಾರ ಒದಗಿಸಬೇಕು ಹಾಗೂ ರೈತರ ಎಲ್ಲಾ ಕೃಷಿ ಸಾಲಗಳನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು ಎಂದು ರೈತರು ಒತ್ತಾಯಿಸಿದರು.

ಬೆಳೆ ನಷ್ಟದಿಂದ ರೈತರು ಕಂಗಾಲಾಗಿದ್ದು, ಕೆಲವೆಡೆ ರೈತರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಬ್ಯಾಂಕುಗಳು ಮತ್ತು ಖಾಸಗಿ ಲೇವಾದೇವಿದಾರರು ಸಾಲ ವಸೂಲಾತಿಗೆ ಕಿರುಕುಳ ನೀಡಬಾರದು ಎಂದು ಅನ್ನದಾತರು ವಿನಂತಿಸಿದರು.

ವಿ.ಬಿ. ಜಿ. ರಾಮ್ ಜಿ ಯೋಜನೆಯಡಿ ಕೆಲಸ ಮಾಡಿದ ಕೂಲಿ ಹಣವನ್ನು ಸಕಾಲಕ್ಕೆ ಪಾವತಿ ಮಾಡಬೇಕು ಎಂದು ರೈತರು ಕೇಂದ್ರ ಬರ ಅಧ್ಯಯನ ತಂಡದ ಮುಂದೆ ತಮ್ಮ ಬೇಡಿಕೆಗಳನ್ನು ಸಲ್ಲಿಸಿದರು.

ರೈತರ ಅಹವಾಲುಗಳನ್ನು ಆಲಿಸಿದ ಕೇಂದ್ರ ತಂಡದ ಅಧಿಕಾರಿಗಳು, ಪರಿಸ್ಥಿತಿಯ ಸಮಗ್ರ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ ಅಗತ್ಯ ನೆರವು ದೊರಕಿಸಿಕೊಡಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಇದೇ ವೇಳೆ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ್ ಬಿ. ಇಟ್ನಾಳ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ಜಿಲ್ಲೆಯ 7 ತಾಲೂಕುಗಳಲ್ಲಿ ಮಳೆಯ ಕೊರತೆಯಿಂದ ಉಂಟಾಗಿರುವ ಬರ ಪರಿಸ್ಥಿತಿ, ಬೆಳೆ ಹಾನಿ, ಕುಡಿಯುವ ನೀರು, ಉದ್ಯೋಗ ಹಾಗೂ ಕಾಮಗಾರಿಗಳ ಸ್ಥಿತಿಗತಿಗಳ ಬಗ್ಗೆ ಕೇಂದ್ರ ಬರ ಅಧ್ಯಯನ ತಂಡಕ್ಕೆ ಸಮಗ್ರವಾಗಿ ವಿವರಿಸಲಾಗಿದೆ. ಜಿಲ್ಲೆಯಲ್ಲಿ ಸುಮಾರು 3,02,000 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ಎನ್‌ಡಿಆರ್‌ಎಫ್ ನಿಯಮಾವಳಿಗಳ ಅನ್ವಯ ಜಿಲ್ಲೆಗೆ ಇನ್‌ಪುಟ್ ಸಬ್ಸಿಡಿ (ಬೆಳೆ ನಷ್ಟ ಪರಿಹಾರ) ರೂಪದಲ್ಲಿ ಅಗತ್ಯವಿರುವ ಅನುದಾನ ಮಾಹಿತಿ ನೀಡಲಾಗಿದೆ. ಕೇಂದ್ರ ತಂಡವು ಇನ್ನೂ ಕೆಲವು ಗ್ರಾಮಗಳನ್ನು ವೀಕ್ಷಿಸಿದ ನಂತರ, ರಾಜ್ಯ ಮಟ್ಟದಲ್ಲಿ ಚರ್ಚೆ ನಡೆಸಿ ಅಂತಿಮವಾಗಿ ಕೇಂದ್ರ ಸರ್ಕಾರಕ್ಕೆ ತನ್ನ ಸಮಗ್ರ ವರದಿಯನ್ನು ಸಲ್ಲಿಸಲಿದೆ ಎಂದರು.

**ಜಾನುವಾರುಗಳಿಗೆಮೇವಿನನಿರ್ವಹಣೆ:**ಜಿಲ್ಲೆಯಲ್ಲಿಸುಮಾರು 12.70ಲಕ್ಷಕುರಿ–ಮೇಕೆಗಳುಹಾಗೂ2.39ಲಕ್ಷದನಕರುಗಳಿದ್ದು, ಸದ್ಯಕ್ಕೆ ಲಭ್ಯವಿರುವ ಮೇವಿನ ಪ್ರಮಾಣವನ್ನು ವಿವರಿಸಲಾಗಿದೆ. ಮುನ್ನೆಚ್ಚರಿಕೆಯಾಗಿ ಗೋಶಾಲೆ ತೆರೆಯುವುದು, ಮೇವಿನ ಬ್ಯಾಂಕ್ ಸ್ಥಾಪಿಸುವುದು ಹಾಗೂ ಮೇವಿನ ಮಿನಿ ಕಿಟ್‌ಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ 15,838 ಮೇವಿನ ಮಿನಿ ಕಿಟ್‌ಗಳು ಮಂಜೂರಾಗಿದ್ದು, ಅವುಗಳ ಪೂರೈಕೆ ಆರಂಭವಾಗಿದೆ. ಇದರಿಂದ ರೈತರಿಗೆ ಮೇವಿನ ಕೊರತೆ ಎದುರಾಗದಂತೆ ಕ್ರಮವಹಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಹನುಮನಾಳದಿಂದ ಮುಂದೆ ಸಾಗಿದ ತಂಡವು, ಕನಕಗಿರಿ ಹೋಬಳಿಯ ತಿಪ್ಪನಾಳ ಗ್ರಾಮಕ್ಕೆ ಭೇಟಿ ನೀಡಿ ರೈತ ಯಮನೂರಪ್ಪ ಅವರ ಕೃಷಿ ಭೂಮಿಯಲ್ಲಿ ಒಣಗುತ್ತಿರುವ ತೊಗರಿ ಬೆಳೆಯನ್ನು ಖುದ್ದು ಪರಿಶೀಲಿಸಿತು. ಬಳಿಕ ಸುಳೇಕಲ್ ಗ್ರಾಮದ ರೈತರೋರ್ವರ ಹೊಲದಲ್ಲಿನ ಕೃಷಿ ಹೊಂಡಕ್ಕೆ ಭೇಟಿ ಕೊಟ್ಟರು. ರೈತ ಸಂಗಪ್ಪ ತಂದೆ ನೂತನ ಶೆಟ್ಟಿ ಅವರ ಹೊಲದಲ್ಲಿ ಮಳೆಯ ಕೊರತೆಯಿಂದ ಹಾನಿಗೊಳಗಾದ ಸೂರ್ಯಕಾಂತಿ ಬೆಳೆ ಮತ್ತು ರೈತ ಸಣ್ಣ ಕಾಶಿಂಸಾಬ ತಂದೆ ಮರ್ದಾನಸಾಬ ಅವರ ಜಮೀನಲ್ಲಿ ನಷ್ಟವಾದ ಮೆಕ್ಕೆಜೋಳ ಮತ್ತು ಅಕ್ಕಪಕ್ಕದ ಇತರೆ ಬೆಳೆಯನ್ನು ಸಹ ವೀಕ್ಷಣೆ ನಡೆಸಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಸಾಹಿಲ್ ಬಾಗ್ಲಾ, ಅಪರ ಜಿಲ್ಲಾಧಿಕಾರಿಗಳಾದ ಸಿದ್ದರಾಮೇಶ್ವರ್, ಜಂಟಿ ಕೃಷಿ ನಿರ್ದೇಶಕರಾದ ಜಿ.ಡಿ. ಕೃಷ್ಣಮೂರ್ತಿ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕರಾದ ಕೃಷ್ಣ ಉಕ್ಕುಂದ್, ಪಶುಪಾಲನಾ ಇಲಾಖೆಯ ಉಪನಿರ್ದೇಶಕರಾದ ಡಾ. ಪಿ.ಎಂ. ಮಲ್ಲಯ್ಯ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ತಹಶೀಲ್ದಾರರು ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

ಸತ್ಯ ಮಿಥ್ಯ
SATYA MITHI
Kannada Daily Morning

# ಕೃಷಿ ಪಂಪ್‌ಸೆಟ್‌ಗಳಿಗೆ 7 ಗಂಟೆ ವಿದ್ಯುತ್, ರಾತ್ರಿ ಸಿಂಗಲ್‌ಫೇಸ್ ಪೂರೈಕೆಗೆ ಒತ್ತಾಯ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ಬರಗಾಲ ಹಾಗೂ ಮಳೆ ಕೊರತೆಯಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಸ್ವಾಮಿನಾಥನ್ ಆಯೋಗದ ಶಿಫಾರಸುಗಳ ಆಶಯದಂತೆ ನ್ಯಾಯಯುತ ಹಾಗೂ ಸಮರ್ಪಕ ಬೆಳೆ ಪರಿಹಾರ ನೀಡಬೇಕು. ರೈತರ ಸಾಲ ಮನ್ನಾ ಮಾಡಬೇಕು ಎಂದು ಕರ್ನಾಟಕ ಪ್ರಾಂತ ರೈತ ಸಂಘ ಹಾಗೂ ಶ್ರೀ ಕಾಲಕಾಲೇಶ್ವರ ರೈತ ಸಂಘದ ನೇತೃತ್ವದಲ್ಲಿ ರೈತರು ವಿದ್ಯುತ್ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

> **ಬರ ಪರಿಸ್ಥಿತಿಯಲ್ಲಿ ರೈತರ ಸಮಸ್ಯೆ ನಮಗೂ ಅರ್ಥವಾಗಿದೆ. ಸದ್ಯ ಕೃಷಿ ಪಂಪ್‌ಸೆಟ್‌ಗಳಿಗೆ 6 ಗಂಟೆಗಳ ಕಾಲ ವಿದ್ಯುತ್ ಪೂರೈಸಲಾಗುತ್ತಿದೆ. ರೈತರ ಬೇಡಿಕೆಗಳ ಕುರಿತು ಈಗಾಗಲೇ ಮೇಲಾಧಿಕಾರಿಗಳೊಂದಿಗೆ ಚರ್ಚೆ ನಡೆಸಿದ್ದೇವೆ. ಪರಿಸ್ಥಿತಿಯಲ್ಲಿ ಸ್ವಲ್ಪ ಮಳೆಯಾಗಿ ಸುಧಾರಣೆ ಕಂಡುಬಂದರೆ, ರೈತರಿಗೆ ಒದಗಿಸಬೇಕಾದ ಎಲ್ಲಾ ಬೇಡಿಕೆಗಳನ್ನು ಈಡೇರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.**
> **ನಜ್ಮುನ್ನೀಸಾ. ಕೆ. ಅಧೀಕ್ಷಕ ಅಭಿಯಂತರ ಅಧಿಕಾರಿ ಹೆಸ್ಕಾಂ.**

ಪ್ರಸಕ್ತ ಸಾಲಿನಲ್ಲಿ ಸಮರ್ಪಕ ಮಳೆಯಾಗದೆ ಬರಗಾಲ ಹಾಗೂ ಹವಾಮಾನ ವೈಪರೀತ್ಯದಿಂದ ಬೆಳೆಗಳು ಸಂಪೂರ್ಣ ಅಥವಾ ಭಾಗಶಃ ಹಾನಿಗೊಳಗಾಗಿವೆ. ಬೀಜ, ಗೊಬ್ಬರ, ಔಷಧ, ಕೂಲಿ ಸೇರಿದಂತೆ ಕೃಷಿಗೆ ಮಾಡಿದ ವೆಚ್ಚವನ್ನೂ ಮರಳಿ ಪಡೆಯಲಾಗದ ಸ್ಥಿತಿ ನಿರ್ಮಾಣವಾಗಿದ್ದು, ರೈತರು ಬ್ಯಾಂಕ್ ಹಾಗೂ ಖಾಸಗಿ ಸಾಲದ ಹೊರೆಗೆ ಸಿಲುಕಿದ್ದಾರೆ. ಹೀಗಾಗಿ ನಷ್ಟಕ್ಕೊಳಗಾದ ರೈತರಿಗೆ ಸಮರ್ಪಕ ಪರಿಹಾರ ಒದಗಿಸುವ ಜತೆಗೆ ಸಾಲ ಮನ್ನಾ ಮಾಡಬೇಕು ಎಂದು ಒತ್ತಾಯಿಸಿದರು.
ಕೃಷಿ ಉತ್ಪಾದನಾ ವೆಚ್ಚದ ಮೇಲೆ ಶೇ.50ರಷ್ಟು ಲಾಭಾಂಶ ಸೇರಿಸಿ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸಬೇಕು ಎಂಬ ಸ್ವಾಮಿನಾಥನ್ ಆಯೋಗದ ಶಿಫಾರಸಿನ ಆಶಯವನ್ನು ಸರ್ಕಾರ ಜಾರಿಗೊಳಿಸಬೇಕು ಎಂದು ರೈತರು ಮನವಿ ಮಾಡಿದರು.
**ವಿದ್ಯುತ್ ಪೂರೈಕೆಗೆ ಒತ್ತಾಯ:** ಕೃಷಿ ಪಂಪ್‌ಸೆಟ್‌ಗಳಿಗೆ ಪ್ರತಿದಿನ ಕನಿಷ್ಠ 7 ಗಂಟೆಗಳ ಗುಣಮಟ್ಟದ ವಿದ್ಯುತ್ ಪೂರೈಸಬೇಕು. ರೈತರಿಗೆ ಅನುಕೂಲವಾಗುವಂತೆ ಸಂಜೆ 6ರಿಂದ ಬೆಳಿಗ್ಗೆ 6ರವರೆಗೆ ಸಿಂಗಲ್‌ಫೇಸ್ ವಿದ್ಯುತ್ ಪೂರೈಕೆ ವ್ಯವಸ್ಥೆ ಕಲ್ಪಿಸಬೇಕು ಎಂದು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು. ರಾತ್ರಿ ವೇಳೆ ವಿದ್ಯುತ್ ಪೂರೈಕೆಯಾಗುವುದರಿಂದ ರೈತರು ಕಾಡುಪ್ರಾಣಿಗಳು ಹಾಗೂ ವಿಷಜಂತುಗಳ ಭೀತಿಯ ನಡುವೆಯೇ ಹೊಲಗಳಿಗೆ ತೆರಳಿ ಪಂಪ್‌ಸೆಟ್‌ಗಳನ್ನು ಚಾಲನೆ ಮಾಡಬೇಕಾಗಿದೆ. ಹೀಗಾಗಿ ರೈತರ ಸುರಕ್ಷತೆಯ ದೃಷ್ಟಿಯಿಂದ ವಿದ್ಯುತ್ ಪೂರೈಕೆಯ ವೇಳಾಪಟ್ಟಿಯನ್ನು ಅನುಕೂಲಕರವಾಗಿ ನಿಗದಿಪಡಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಪರಶುರಮ ರಾಠೋಡ, ಹುಸೇನಸಾಬ ನೀಶಾಂದಾರ, ನಾರಾಯನಪ್ಪ ರಾಠೋಡ, ರೂಪೇಶ ಮಾಳೋತ್ತರ, ಈರಪ್ಪ ರಾಠೋಡ, ಪೀರು ರಾಠೋಡ, ಬಾಲು ರಾಠೋಡ, ಡಿ. ಜಿ. ಕಟ್ಟಿಮನಿ, ಬಸವರಾಜ ಬಂಕದ, ಚಂದ್ರು ರಾಠೋಡ ಸೇರಿದಂತೆ ಗಜೇಂದ್ರಗಡ ಸುತ್ತಮುತ್ತಲಿನ ಗ್ರಾಮಸ್ಥ ರೈತರು ಇದ್ದರು.



# ಹುಲಿಬೀರ ಉತ್ತರ ಕರ್ನಾಟಕ ಸೊಗಡಿನ ಹಳ್ಳಿ ಬದುಕಿನ ಜೀವಂತ ಕಾವ್ಯ ಹಂದರ

**ಸಾ**ಮಾನ್ಯವಾಗಿ ಚಿತ್ರಮಂದಿರದತ್ತ ಮುಖ ಮಾಡದ ಪ್ರೇಕ್ಷಕನನ್ನೂ ತನ್ನತ್ತ ಸೆಳೆದು, ಮೂರು ಗಂಟೆಗಳ ಕಾಲ ಥಿಯೇಟರ್‌ನಲ್ಲಿ ಕುಳಿತ ಜಾಗದಿಂದ ಕದಲದಂತೆ ಮಾಡುವುದು ಪ್ರಾದೇಶಿಕ ಸಿನಿಮಾಗಳ ಶಕ್ತಿ. 'ಯರ್ರಾಬಿರ್ರಿ' ಚಿತ್ರದ ಮೂಲಕ ಗಮನಸೆಳೆದಿದ್ದ ಉತ್ತರ ಕರ್ನಾಟಕದ ಭರವಸೆಯ ನಟ 'ರೂರಲ್ ಸ್ಟಾರ್' ಅಂಜನ್ ಅಭಿನಯದ 'ಹುಲಿಬೀರ' ಸಿನಿಮಾ ನಿಖರವಾಗಿ ಇದೇ ಕೆಲಸವನ್ನು ಅತ್ಯಂತ ಪ್ರಾಮಾಣಿಕವಾಗಿ ಮಾಡಿದೆ.
**ಕಥಾಹಂದರ: ಹಳ್ಳಿಯ ಮಣ್ಣಿನ ವಾಸನೆ ಮತ್ತು ಕಟು ಸತ್ಯಗಳು:** 'ಹುಲಿಬೀರ' ಕೇವಲ ಒಬ್ಬ ನಾಯಕನ ಕಥೆಯಲ್ಲ; ಇದು ಉತ್ತರ ಕರ್ನಾಟಕದ ಗ್ರಾಮೀಣ ಜೀವನಶೈಲಿ, ಕುರಿಗಾಯಿಗಳ ಬದುಕಿನ ಹೋರಾಟ ಮತ್ತು ಅಲ್ಲಿನ ಮೌಲ್ಯಗಳ ಪ್ರತಿರೂಪ.
ಅಕ್ಷರ ಕಲಿಯದ ಅನಕ್ಷರಸ್ಥ ಎಂಬ ಒಂದೇ ಕಾರಣಕ್ಕೆ ಹುಲಿಬೀರನನ್ನು ಸಮಾಜ ನೋಡುವ ದೃಷ್ಟಿಕೋನ, ನಂತರ ತಾಯಿಯ ಮಾತಿಗೆ ಬೆಲೆ ಕೊಟ್ಟು ಆತ ಬದಲಾಗುವ ರೀತಿ, ಮತ್ತು ಬದಲಾದ ಮೇಲೆಯೂ ಆತನನ್ನು ಸಮಾಜ ಸ್ವೀಕರಿಸುವ ಪರಿ ಅತ್ಯಂತ ನೈಜವಾಗಿ ಮೂಡಿಬಂದಿದೆ.
ಕುರಿ ಕಾಯುವ ಯುವಕರ ದೈನಂದಿನ ಬದುಕು, ಅವರ ಮುಗ್ಧತೆ, ಪ್ರೀತಿ–ಪ್ರೇಮದ ಸಾಲುಗಳು ಮತ್ತು ಕೌಟುಂಬಿಕ ಬಾಂಧವ್ಯಗಳನ್ನು ನಿರ್ದೇಶಕರು ಕಥೆಯ ಉದ್ದಕ್ಕೂ ಚೆನ್ನಾಗಿ ಹೆಣೆದಿದ್ದಾರೆ.
**ಉತ್ತರಕರ್ನಾಟಕದ ಸಂಸ್ಕೃತಿ ಮತ್ತು ಸೌದತ್ತಿ ಯಲ್ಲಮ್ಮನ ಮಹಿಮೆ:**
ಜೋಗತಿಯರ ಸಂಪ್ರದಾಯ, ಸೌದತ್ತಿ ರೇಣುಕಾ ಯಲ್ಲಮ್ಮ ತಾಯಿಯ ಆರಾಧನೆ ಹಾಗೂ ಶಕ್ತಿಯನ್ನು ಚಿತ್ರದಲ್ಲಿ ಅತ್ಯಂತ ಗೌರವಪೂರ್ವಕವಾಗಿ ತೋರಿಸಲಾಗಿದೆ. ಜೋಗಮ್ಮರನ್ನು ದೇವರೆಂದು ಭಾವಿಸುವ ನಮ್ಮ ನಾಡಿನ ಪದ್ಧತಿಗೆ ಚಿತ್ರತಂಡ ಸೂಕ್ತ ಬೆಳಗು ಚೆಲ್ಲಿದೆ.
ಆಡಳಿತ ವ್ಯವಸ್ಥೆಯ ಭ್ರಷ್ಟಾಚಾರಕ್ಕೆ ಕನ್ನಡಿ: ಗ್ರಾಮ ಪಂಚಾಯತಿ ಮಟ್ಟದಲ್ಲಿ ನಡೆಯುವ ಡಬಲ್ ಗೇಮ್, ಅಧಿಕಾರಿ ವರ್ಗದ ಅಧಿಕಾರದ ದರ್ಪ, ಮತ್ತು ಸ್ಥಳೀಯ ಜನಪ್ರತಿನಿಧಿಗಳ ಕೆಟ್ಟ ಮನಸ್ಥಿತಿಯಿಂದ ಗ್ರಾಮೀಣ ಜನ ಹೇಗೆ ತೊಂದರೆ ಅನುಭವಿಸುತ್ತಾರೆ ಎಂಬುದನ್ನು ಯಾವುದೇ ಮುಚ್ಚುಮರೆಯಿಲ್ಲದೆ ನಿರೂಪಿಸಲಾಗಿದೆ.
ಕೂಡು ಕುಟುಂಬದ ಮೌಲ್ಯಗಳು: ಒಟ್ಟಿಗೆ ಬಾಳುವ ಕೂಡು ಕುಟುಂಬಗಳು ಮತ್ತು ವಿಭಜನೆಯಾದಾಗ ಎದುರಾಗುವ ಸವಾಲುಗಳನ್ನು, ಶಿಕ್ಷಣಕ್ಕೆ ಹಳ್ಳಿಗಳಲ್ಲಿ ನೀಡುವ ಮಹತ್ವವನ್ನು ಪ್ರಬುದ್ಧವಾಗಿ ಚರ್ಚಿಸಲಾಗಿದೆ.
**ಅಭಿನಯ ಮತ್ತು ತಾಂತ್ರಿಕ ಪಕ್ವತೆ:** ಅಂಜನ್ ('ರೂರಲ್ ಸ್ಟಾರ್'): ಹುಲಿಬೀರನ ಪಾತ್ರಕ್ಕೆ ಅಂಜನ್ ಜೀವ ತುಂಬಿದ್ದಾರೆ. ತಾಯಿಯ ಮಾತಿಗೆ ಓಗೊಡುವ ಮಗನಾಗಿ,




ಊರಿನ ಒಳಿತಿಗಾಗಿ ಸವಾಲುಗಳನ್ನು ಎದುರಿಸುವ ನಾಯಕನಾಗಿ ಅವರ ಅಭಿನಯ ಪರಿಣಾಮಕಾರಿ. ನಟನೆಯಲ್ಲಿ ಯಾವುದೇ ಆಡಂಬರವಿಲ್ಲದೆ ನೈಜತೆ ಎದ್ದು ಕಾಣುತ್ತದೆ.
ಹಿರಿಯ ನಟ ರಂಗಾಯಣ ರಘು ಹಾಗೂ ಗಂಗಾವತಿ ಪ್ರಾಣೇಶ್ ತಮ್ಮ ಅನುಭವಕ್ಕೆ ತಕ್ಕಂತೆ ಅದ್ಭುತವಾಗಿ ಅಭಿನಯಿಸಿದ್ದಾರೆ ಸಂತೋಷ ಕೇರಿ, ನಾಗರಾಜ ನಿಲುಗಲ್ ಮತ್ತು ವನು ಪಾಟೀಲ್ ಸಿಕ್ಕ ಅವಕಾಶವನ್ನು ಅದ್ಭುತವಾಗಿ ಬಳಸಿಕೊಂಡಿದ್ದಾರೆ ಸಿನಿಮಾದ ತೂಕ ಹೆಚ್ಚಿಸಿದ್ದಾರೆ. ಸಂಗೀತ ಹಾಗೂ ನಿರ್ದೇಶನ: ಚಿತ್ರದ ಹಾಡುಗಳು ಸನ್ನಿವೇಶಕ್ಕೆ ತಕ್ಕಂತೆ ಮೂಡಿಬಂದಿದ್ದು, ಎಲ್ಲೂ ಅತಿಯಾದ ರೊಮ್ಯಾನ್ಸ್ ಅಥವಾ ಅನಗತ್ಯ ಮಾಸ್ ದೃಶ್ಯಗಳಿಲ್ಲ. ಇಡೀ ಕುಟುಂಬ ಒಟ್ಟಾಗಿ ಕುಳಿತು ಯಾವುದೇ ಮುಜುಗರವಿಲ್ಲದೆ ನೋಡಬಹುದಾದ ನೀಟಾದ ಚಿತ್ರಕಥೆ ಇದರಲ್ಲಿದೆ.
'ಹುಲಿಬೀರ' ಎಲ್ಲಿಯೂ ಹಾದಿ ತಪ್ಪುವುದಿಲ್ಲ, ಪ್ರೇಕ್ಷಕರನ್ನು ದಿಕ್ಕು ತಪ್ಪಿಸುವುದಿಲ್ಲ. ಬದಲಿಗೆ ನೋಡುಗರನ್ನು ಕೊನೆಯವರೆಗೂ ಹಿಡಿದಿಟ್ಟುಕೊಳ್ಳುವ ಸಾಮರ್ಥ್ಯ ಹೊಂದಿದೆ. ಉತ್ತರ ಕರ್ನಾಟಕ ಭಾಗದ ಉದಯೋನ್ಮುಖ ಕಲಾವಿದರನ್ನು ಬೆಂಬಲಿಸುವುದರ ಜೊತೆ–ಗೆ, ಒಂದು ಅತ್ಯುತ್ತಮ ಕೌಟುಂಬಿಕ ಗ್ರಾಮೀಣ ಸಿನಿಮಾವನ್ನು ನೋಡಿದ ಅನುಭವ ಪಡೆಯಲು 'ಹುಲಿಬೀರ' ಚಿತ್ರವನ್ನು ಪ್ರತಿಯೊಬ್ಬರೂ ಚಿತ್ರಮಂದಿರದಲ್ಲೇ ನೋಡಿ ಬೆಂಬಲಿಸಬೇಕಿದೆ.

# ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರದ ಚುನಾವಣೆ, ಚುನಾವಣಾ ವೀಕ್ಷಕರ ನೇಮಕ

**ಸತ್ಯಮಿಥ್ಯ ಸುದ್ದಿಮೂಲ ಗದಗ :**
ಕರ್ನಾಟಕ ವಿಧಾನ ಪರಿಷತ್ತಿನ ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರದಿಂದ ನಡೆಯಲಿರುವ ದ್ವೈವಾರ್ಷಿಕ ಚುನಾವಣೆ–2026ಕ್ಕೆ ಸಂಬಂಧಿಸಿದಂತೆ ಡಾ.ವಿಶಾಲ ಆರ್. ಇವರನ್ನು ಭಾರತ ಚುನಾವಣಾ ಆಯೋಗವು ಚುನಾವಣಾ ವೀಕ್ಷಕರನ್ನಾಗಿ ನೇಮಿಸಿದೆ.
ಸಾರ್ವಜನಿಕರು ಈ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ಅಹವಾಲನ್ನು ತಿಳಿಸುವುದಿದ್ದಲ್ಲಿ ವೀಕ್ಷಕರನ್ನು ಅವರ email: vishalravirediffmail.com & vishal.r@nic.in ರಲ್ಲಿ ಹಾಗೂ ಚುನಾವಣಾ ವೀಕ್ಷಕರ ಲೈಸನ್ ಅಧಿಕಾರಿಯಾದ ಮಹಮ್ಮದ ಕೈರ್ಖುರ್ ಮೊ.ಸಂಖ್ಯೆ : 9164055006 ಇವರ ಮೂಲಕ ಚುನಾವಣಾ ವೀಕ್ಷಕರನ್ನು ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರಾದ ಕೆ.ಎಂ.ಜಾನಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಮಖಂಡಿ ತಾಲೂಕು 10ನೇ ಕನ್ನಡ ಸಾಹಿತ್ಯ ಸಮ್ಮೇಳನ: ಕಸಾಪ ಮಾಜಿ ಅಧ್ಯಕ್ಷ ಮನು ಬಳಿಗಾರ ಅಭಿಮತ

# ಭಾಷೆ, ಸಾಹಿತ್ಯ, ಇತಿಹಾಸ: ಅಧ್ಯಯನಶೀಲತೆ ಅಗತ್ಯ

**ಸತ್ಯಮಿಥ್ಯ ಸುದ್ದಿಮೂಲ ಬಾಗಲಕೋಟೆ:**
"ಕನ್ನಡಕ್ಕೆ ಸಾವಿರಾರು ವರ್ಷಗಳ ಶ್ರೀಮಂತ ಪರಂಪರೆ ಇದೆ. ದಕ್ಷಿಣ ಭಾರತದಲ್ಲಿ ಕನ್ನಡ ಲಿಪಿ ವಿವಿಧ ಭಾಷೆಗಳಿಗೂ ಬಳಕೆಯಾಗಿದ್ದ ಐತಿಹಾಸಿಕ ಹಿನ್ನೆಲೆಯನ್ನು ಅರಿಯಬೇಕು. ಭಾಷೆ, ಸಾಹಿತ್ಯ ಮತ್ತು ಇತಿಹಾಸದ ಬಗ್ಗೆ ಅಧ್ಯಯನಶೀಲತೆ ಹಾಗೂ ಹೆಮ್ಮೆ ಬೆಳೆಸಿಕೊಳ್ಳಬೇಕು" ಎಂದು ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಮನು ಬಳಿಗಾರ ಹೇಳಿದರು.
ಜಮಖಂಡಿ ಬಸವ ಭವನದಲ್ಲಿ ಭಾನುವಾರ ತಾಲೂಕಿನ 10ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.
"ಕನ್ನಡದ ಸಾಹಿತಿಗಳು ಹಲವು ಜ್ಞಾನಪೀಠ ಪ್ರಶಸ್ತಿಗಳನ್ನು ಪಡೆದಿರುವುದು ಹೆಮ್ಮೆಯ ಸಂಗತಿ. ಆದರೆ ಹಲವು ವರ್ಷಗಳಿಂದ ಕನ್ನಡಕ್ಕೆ ಮತ್ತೊಂದು ಜ್ಞಾನಪೀಠ ಪ್ರಶಸ್ತಿ ದೊರೆತಿಲ್ಲ. ಮುಂದಿನ ದಿನಗಳಲ್ಲಿ ಕನ್ನಡ ಸಾಹಿತ್ಯ ಮತ್ತಷ್ಟು ಸಮೃದ್ಧವಾಗಬೇಕಾದರೆ ಭಾಷೆ ಹಾಗೂ ಸಾಹಿತಿಯನ್ನು ಕಟ್ಟುವ, ಬೆಳೆಸುವ ಕಾರ್ಯ ನಿರಂತರವಾಗಿ ನಡೆಯಬೇಕು" ಎಂದರು.
ಜಮಖಂಡಿ ಶಾಸಕ ಜಗದೀಶ ಗುಡಗುಂಟಿ ಮಾತನಾಡಿ, "ಕನ್ನಡ ಭಾಷೆ, ನಾಡು–ನುಡಿ, ಸಾಹಿತ್ಯ, ಸಂಸ್ಕೃತಿ ಹಾಗೂ ಪರಂಪರೆಯನ್ನು ಉಳಿಸಿ ಬೆಳೆಸುವ ಕಾರ್ಯ ಸಮ್ಮೇಳನಗಳಿಗೆ ಮಾತ್ರ ಸೀಮಿತವಾಗಬಾರದು. ಕನಿಷ್ಠ ಮೂರು ತಿಂಗಳಿಗೊಮ್ಮೆ ತಾಲೂಕು ಮಟ್ಟದಲ್ಲಿ ಕವಿ ಗೋಷ್ಠಿ, ಸಾಹಿತ್ಯಿಕ ಸಮ್ಮೇಳನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಕನ್ನಡದ ವಾತಾವರಣವನ್ನು ಜೀವಂತವಾಗಿಡಬೇಕು" ಎಂದರು.
ಅಥಣಿ ಮೋಟಗಿ ಮಠದ ಅವಧೂತರು, ಮುತ್ತಿನಕಂತಿ ಶಿವಲಿಂಗ ದೇವರವರ, ಪ್ರಭುಚನ್ನಬಸವ ಸ್ವಾಮೀಜಿ, ಶ್ರೀ ಕೃಷ್ಣಾನಂದ ಅವಧೂತರು ಮಾತನಾಡಿದರು.
ಕನ್ನಡ ಭಾಷೆ, ಸಂಸ್ಕೃತಿ ಮತ್ತು ಪರಂಪರೆ ಜೀವಂತವಾಗಿ ಉಳಿಯುವುದಕ್ಕೆ ಗ್ರಾಮೀಣ ಬದುಕಿನ ತಾಯಂದಿರು, ಹಿರಿಯರು ಹಾಗೂ ನೆಲದೊಂದಿಗೆ ಬೆಸೆದುಕೊಂಡಿರುವ ಜನರ ಕೊಡುಗೆ ಪ್ರಮುಖವಾಗಿದೆ ಎಂದು ಅವರು ಹೇಳಿದರು.
**'ಕನ್ನಡಕ್ಕೆ ಎಲ್ಲ ಕ್ಷೇತ್ರಗಳಲ್ಲೂ ಆದ್ಯತೆ ಸಿಗಲಿ':** ಸಮ್ಮೇಳನಾಧ್ಯಕ್ಷ ಸಂಗಮೇಶ ಮಟೋಳಿ ಮಾತನಾಡಿ, "ಕನ್ನಡ ಭಾಷೆ ಕೇವಲ ಮನೆಯಲ್ಲಿ ಮಾತನಾಡುವ ಭಾಷೆಯಾಗದೆ, ಶಿಕ್ಷಣ, ಉದ್ಯೋಗ ಹಾಗೂ ದುಡಿಮೆಯ ಮೂಲಕ ಬದುಕು ಕಟ್ಟಿಕೊಡುವ ಅನ್ನದ ಭಾಷೆಯಾಗಬೇಕು. ಇದಕ್ಕಾಗಿ ಸರ್ಕಾರ ರಾಜಕೀಯ ಇಚ್ಛಾಶಕ್ತಿಯೊಂದಿಗೆ ಕನ್ನಡಕ್ಕೆ ಎಲ್ಲ ಕ್ಷೇತ್ರಗಳಲ್ಲಿಯೂ ಆದ್ಯತೆ ನೀಡಬೇಕು" ಎಂದು ಒತ್ತಾಯಿಸಿದರು.




> **ಸಂತ್ರಸ್ತರ ಸಮಸ್ಯೆ ಬಗೆಹರಿಸಿ**
> **ಜಮಖಂಡಿಯನ್ನು ಜಿಲ್ಲೆಯನ್ನಾಗಿ ಹಾಗೂ ಸಾವಳಗಿಯನ್ನು ತಾಲ್ಲೂಕನ್ನಾಗಿ ಮಾಡಬೇಕು. ಆಲಮಟ್ಟಿ ಹಿನ್ನೀರಿನ ಮುಳುಗಡೆ ಸಂತ್ರಸ್ತರ ಸಮಸ್ಯೆ ಪರಿಹರಿಸಬೇಕು. ಹೊಸ ಕೈಗಾರಿಕಾ ಪ್ರದೇಶ ಸ್ಥಾಪಿಸಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.**

"ಕನ್ನಡಕ್ಕೆ 2008ರಲ್ಲಿ ಶಾಸ್ತ್ರೀಯ ಭಾಷೆಯ ಸ್ಥಾನಮಾನ ದೊರೆತಿ–ದ್ದರೂ, ಅದಕ್ಕೆ ಪೂರಕವಾದ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಸರ್ಕಾರಗಳು ಸಂಪೂರ್ಣವಾಗಿ ಮನಸ್ಸು ಮಾಡಿಲ್ಲ. ಕನ್ನಡಿಗರಲ್ಲಿನ ಅಭಿಮಾನದ ಕೊರತೆ, ಇಂಗ್ಲಿಷ್ ವ್ಯಾಮೋಹ ಹಾಗೂ ಎಲ್ಲ ಭಾಷಿಕರೊಂದಿಗೆ ಬೆರೆಯುವ ಔದಾರ್ಯದಿಂದಾಗಿ ಕನ್ನಡ ಭಾಷೆಯ ಬೆಳವಣಿಗೆ ನಿರೀಕ್ಷಿತ ಮಟ್ಟದಲ್ಲಿ ಆಗಿಲ್ಲ.
ಸರ್ಕಾರ ಒಂದೆಡೆ ಪ್ರಾಥಮಿಕ ಶಿಕ್ಷಣವನ್ನು ಕನ್ನಡದಲ್ಲಿಯೇ ನೀಡಬೇಕು ಎಂದು ಹೇಳುತ್ತಿದ್ದು, ಮತ್ತೊಂದೆಡೆ ಇಂಗ್ಲಿಷ್ ಮಾಧ್ಯಮ ಶಾಲೆಗಳಿಗೆ ಅನುಮತಿ ನೀಡುತ್ತಿದೆ. ಇದರಿಂದ ಕನ್ನಡ ಭಾಷೆ ಮನೆಯೊಳಗೆ ಮಾತನಾಡುವ ಭಾಷೆಗೆ ಮಾತ್ರ ಸೀಮಿತವಾಗುವ ಆತಂಕವಿದೆ. ಕನ್ನಡ ಭಾಷೆಯ ವಿಷಯದಲ್ಲಿ ಎಲ್ಲ ರಾಜಕೀಯ ಪಕ್ಷಗಳು ಒಗ್ಗೂಡಿ ಸಂವಿಧಾನ ತಿದ್ದುಪಡಿ ತರಲು ಮುಂದಾಗಬೇಕು. ಇದಕ್ಕೆ ರಾಜಕೀಯ ಇಚ್ಛಾಶಕ್ತಿ ಅಗತ್ಯ" ಎಂದರು.
"ನಮ್ಮ ಅನುಕೂಲಕ್ಕಾಗಿ ಇತರ ಭಾಷೆಗಳನ್ನು ಕಲಿಯಬೇಕು. ಇಂಗ್ಲಿಷ್ ವ್ಯಾಮೋಹದಿಂದ ಕನ್ನಡವನ್ನು ಕಡೆಗಣಿಸುವುದು ಸರಿಯಲ್ಲ. ತಮ್ಮ ಮಕ್ಕಳಿಗೆ ಕನ್ನಡ ಮಾತೃಭಾಷೆಯ ಮೂಲಕ ಶಿಕ್ಷಣ ಕೊಡಿಸುವುದು ಪಾಲಕರ ಸಾಂಸ್ಕೃತಿಕ ಹೊಣೆಗಾರಿಕೆಯಾಗಿದೆ" ಎಂದರು.
**ಅದ್ದೂರಿ ಮೆರವಣಿಗೆ:** ಸಮ್ಮೇಳನದ ಅಂಗವಾಗಿ ಕನ್ನಡಾಂಬೆಯ ಭವ್ಯ ಮೆರವಣಿಗೆ ಪ್ರಮುಖ ರಸ್ತೆಗಳಲ್ಲಿ ನಡೆಯಿತು. ಕೆಂಪು–ಹಳದಿ ಕನ್ನಡ ಧ್ವಜ ಹಾಗೂ ತೋರಣ ಕಮಾನುಗಳಿಂದ ರಸ್ತೆಗಳನ್ನು ಕಂಗೊಳಿಸಲಾಗಿತ್ತು. ಡೊಳ್ಳು, ಸಂಬಾಳ, ಕರಡಿ, ಮಜಲು, ಹಲಗಿ ಸೇರಿದಂತೆ ವಿವಿಧ ಜಾನಪದ ವಾದ್ಯಗಳ ಸದ್ದಿನ ನಡುವೆ ಕನ್ನಡಾಭಿಮಾನಿಗಳು, ಸಾಹಿತಿಗಳು, ಸಾಹಿತ್ಯಾಸಕ್ತರು ಹಾಗೂ ಶಿಕ್ಷಕರು ಕನ್ನಡಪರ ಘೋಷಣೆಗಳನ್ನು ಮೊಳಗಿಸುವ ಮೂಲಕ ಕನ್ನಡದ ಕಂಪು ಪಸರಿಸಿದರು.

> **ಜಮಖಂಡಿ ಲೋಕಸಭಾ ಕ್ಷೇತ್ರ ರಚನೆಗೆ ಒತ್ತಾಯ**
> **ಸಮ್ಮೇಳನಾಧ್ಯಕ್ಷರು ಜಮಖಂಡಿ ಲೋಕಸಭಾ ಮತಕ್ಷೇತ್ರ ರಚನೆ, ವಿಶ್ವವಿದ್ಯಾಲಯಕ್ಕೆ ಜಮಖಂಡಿ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಮಾಡಿ ಉನ್ನತೀಕರಿಸುವುದು, ಪಟವರ್ಧನ ಸಂಸ್ಥಾನಿಕರ ಪುತ್ಥಳಿ ಅನಾವರಣ, ಕನ್ನಡ ಭವನ ನಿರ್ಮಾಣಕ್ಕೆ ನಿವೇಶನ ಕಲ್ಪಿಸುವುದು, ಹುನ್ನೂರಿನಿಂದ ವಿಜಯಪುರ ರಸ್ತೆ ಬೈಪಾಸ್ ನಿರ್ಮಾಣ ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟರು. 2036ರ ಕಾಮನ್‌ವೆಲ್ತ್ ಕ್ರೀಡಾಕೂಟಕ್ಕೆ 14ರಿಂದ 16 ವರ್ಷದ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ ತರಬೇತಿ ನೀಡಬೇಕು. ಕ್ರೀಡಾಶಾಲೆ ಸ್ಥಾಪಿಸಬೇಕು. ಸಂಚಾರ ಪೊಲೀಸ್ ಠಾಣೆ ಆರಂಭಿಸಬೇಕು.**

ಶಾಸಕ ಜಗದೀಶ ಗುಡಗುಂಟಿ ಮೆರವಣಿಗೆಗೆ ಚಾಲನೆ ನೀಡಿದರು. ಸಮ್ಮೇಳನಾಧ್ಯಕ್ಷ ಸಂಗಮೇಶ ಮಟೋಳಿ ಕನ್ನಡಾಂಬೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.
ಸಮ್ಮೇಳನದಲ್ಲಿ ಜಿ.ಎಸ್. ನ್ಯಾಮಗೌಡ, ಶಿವಾನಂದ ಪಾಟೀಲ, ನಾಗಪ್ಪ ಸನದಿ, ತಾತಾಸಾಹೇಬ ಬಾಂಗಿ, ಎನ್.ಎಸ್. ಮಹಾರಾಜವರ, ಪ್ರೊ. ಬಸವರಾಜ ಕಡ್ಡಿ, ಶಂಕರಲಮಾಣಿ, ಪಿ.ಎಸ್. ಕಟ್ಟಿಮನಿ ಸೇರಿದಂತೆ ಹಲವರು ಇದ್ದರು.
ನಾಡಗೀತೆ ಹಾಗೂ ರೈತಗೀತೆಯನ್ನು ಸರಿತಾ ಶಿರಗುಪ್ಪಿ, ಪ್ರಭು ಹಿಡಕಲ್ ಹಾಗೂ ಸಂಗಡಿಗರು ಹಾಡಿದರು. ಕಸಾಪ ತಾಲೂಕು ಘಟಕದ ಅಧ್ಯಕ್ಷ ಸಂತೋಷ ತಳಕೇರಿ ಸ್ವಾಗತಿಸಿದರು. ಜಿಲ್ಲಾ ಘಟಕದ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಆಶಯ ನುಡಿ ಹೇಳಿದರು. ಮಹಾಂತೇಶ ನರಸನಗೌಡ್ರ ವಂದಿಸಿದರು. ಕಾರ್ಯಕ್ರಮವನ್ನು ಸರಿತಾ ಶಿರಗುಪ್ಪಿ ನಿರೂಪಿಸಿದರು.

# ಭಕ್ತಿಯ ಕಂಪು ಪರಂಪರೆಯ ಬೆಳಕು: ನರೇಗಲ್ಲ ಹಿರೇಮಠದ ಜಾತ್ರೆಗೆ ಕಳೆ

**ನರೇಗಲ್ಲ:** ಧರ್ಮದ ಕಂಪು, ಭಕ್ತಿಯ ಭಾವ ಹಾಗೂ ಶತಮಾನಗಳ ಪರಂಪರೆಯ ಸೊಬಗನ್ನು ಹೊತ್ತು ನರೇಗಲ್ಲ ಪಟ್ಟಣದ ಹಿರೇಮಠದ ಜಾತ್ರಾ ಮಹೋತ್ಸವಕ್ಕೆ ಸಿದ್ಧತೆಗಳು ಭರದಿಂದ ಸಾಗಿವೆ. ಅ.29ರಿಂದ ಆರಂಭವಾಗಿ ಒಂಬತ್ತು ದಿನಗಳ ಕಾಲ ಜಾತ್ರಾ ಮಹೋತ್ಸವ ನಡೆಯಲಿದ್ದು, ಈ ಬಾರಿ ಹಲವು ವಿಶೇಷ ಕಾರ್ಯಕ್ರಮಗಳೊಂದಿಗೆ ಮಠದ ಆವರಣ ಭಕ್ತರ ಆಧ್ಯಾತ್ಮಿಕ ಸಂಗಮಕ್ಕೆ ಸಾಕ್ಷಿಯಾಗಲಿದೆ.



ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಭಾನುವಾರ ಸಂಜೆ ನಡೆದ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಹಿರೇಮಠದ ಪೀಠಾಧ್ಯಕ್ಷರಾದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ ಮಾತನಾಡಿದರು.
**ಧರ್ಮ–ಸಂಸ್ಕೃತಿ ಜನಮನಕ್ಕೆ ತಲುಪಲಿ:** ಧರ್ಮ, ಸಂಸ್ಕೃತಿ,ಪರಂಪರೆ ಹಾಗೂ ಧಾರ್ಮಿಕ ವಿಚಾರಗಳನ್ನು ಜನಸಾಮಾನ್ಯರಿಗೆ ಪರಿಚಯಿಸಿ, ದೈವಿಕ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಉದ್ದೇಶದಿಂದ ಜಾತ್ರಾ ಮಹೋತ್ಸವ ಹಾಗೂ ಪುಣ್ಯಸ್ಮರಣೋತ್ಸವಗಳನ್ನು ಆಚರಿಸಲಾಗುತ್ತಿದೆ. ಧಾರ್ಮಿಕ ಆಚರಣೆಗಳು ಕೇವಲ ಸಂಪ್ರದಾಯಕ್ಕೆ ಸೀಮಿತವಾಗದೆ ಸಮಾಜದಲ್ಲಿ ನೈತಿಕತೆ, ಸದಾಚಾರ, ಭಕ್ತಿ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವಂತಿರಬೇಕು ಎಂದು ಶ್ರೀಗಳು ಹೇಳಿದರು.
ಜಾತ್ರೆಗಳು ಎಲ್ಲ ವರ್ಗದ ಜನರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಮೂಲಕ ನಮ್ಮ ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಮಹತ್ವದ ವೇದಿಕೆಗಳಾಗಿವೆ. ಭಕ್ತಿ, ಸಂಸ್ಕೃತಿ ಮತ್ತು ಸೌಹಾರ್ದದ ಸಂದೇಶವನ್ನು ಸಾರುವಂತಾಗಬೇಕು ಎಂದರು.
**ಮೂರು ವಿಶೇಷ ಸಂಭ್ರಮ:** ಈ ಬಾರಿಯ ಜಾತ್ರಾ ಮಹೋತ್ಸವಕ್ಕೆ ವಿಶೇಷ ಮೆರುಗು ನೀಡುವಂತೆ ಹಿರೇಮಠದ ಪರಂಪರೆ ಹಾಗೂ ಶ್ರೀಗಳ ಸೇವಾ ಕಾರ್ಯಗಳನ್ನು ಸ್ಮರಿಸುವ ಪುಣ್ಯಸ್ಮರಣೋತ್ಸವದ ದಶಮಾನೋತ್ಸವ, ಶ್ರೀಗಳ ಜನ್ಮೋತ್ಸವದ ಸುವರ್ಣ ಮಹೋತ್ಸವ ಹಾಗೂ ಪಟ್ಟಾಧಿಕಾರದ ರಜ–ತ ಮಹೋತ್ಸವ ಆಚರಿಸಲಾಗುವುದು. ಹೀಗಾಗಿ ಈ ವರ್ಷದ ಜಾತ್ರೆ ಭಕ್ತರಿಗೆ ಹಾಗೂ ಮಠದ ಅಭಿಮಾನಿಗಳಿಗೆ ವಿಶೇಷ ಸ್ಮರಣೀಯವಾಗಲಿದೆ ಎಂದು ಶ್ರೀಗಳು ತಿಳಿಸಿದರು.
ಜಾತ್ರೆಯ ಅಂಗವಾಗಿ ಪ್ರತಿದಿನ ಅನ್ನದಾನ ನಡೆಯಲಿದ್ದು, ವಿವಿಧ ವಿಷಯಗಳ ಕುರಿತು ವಿದ್ವಾಂಸರು ಹಾಗೂ ಧಾರ್ಮಿಕ ಚಿಂತಕ–ರಿಂದ ಪ್ರವಚನ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಶಾಲಾ ಮಕ್ಕಳಿಗಾಗಿ ವಿವಿಧ ಮನರಂಜನಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.
ಶ್ರೀಗಳ ಸಿದ್ಧಾಂತ ಶಿಖಾಮಣಿ ಪ್ರವಚನದ ಮೂಲಕ ಜಾತ್ರಾ ಮಹೋತ್ಸವದ ಧಾರ್ಮಿಕ ಆಶಯವನ್ನು ಜನರಿಗೆ ತಲುಪಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಈ ಬಾರಿ ಜಾತ್ರೆಯನ್ನು ಅತ್ಯಂತ ಸರಳ ಹಾಗೂ ಸಂಕ್ಷಿಪ್ತವಾಗಿ ಆಚರಿಸುವುದರ ಜೊತೆಗೆ ಅರ್ಥಪೂರ್ಣ ಕಾರ್ಯಕ್ರಮಗಳಿಗೆ ಆದ್ಯತೆ ನೀಡಲಾಗುವುದು ಎಂದು ತಿಳಿಸಲಾಯಿತು.
**ಮಠದ ಪರಂಪರೆ ದಾಖಲಿಸುವ ಗ್ರಂಥ:** ಹಿರೇಮಠದ ಪರಂಪರೆ, ಧಾರ್ಮಿಕ ಸೇವೆ ಹಾಗೂ ಶ್ರೀಗಳ ಸಮಾಜಮುಖಿ ಕಾರ್ಯಗಳನ್ನು ದಾಖಲಿಸುವ ಉದ್ದೇಶದಿಂದ ಗ್ರಂಥವೊಂದನ್ನು ಹೊರತರಲು ಉದ್ದೇಶಿಸಲಾಗಿದೆ. ಗ್ರಂಥ ರಚನೆಯ ಕಾರ್ಯವನ್ನು ಶೀಘ್ರದಲ್ಲೇ ಆರಂಭಿಸಲಾಗುವುದು ಎಂದು ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.
ಜಾತ್ರಾ ಮಹೋತ್ಸವವು ಕೇವಲ ಧಾರ್ಮಿಕ ಆಚರಣೆಯಾಗದೆ, ಸಮಾಜದಲ್ಲಿ ಸೌಹಾರ್ದತೆ, ಭಕ್ತಿಭಾವ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ವೇದಿಕೆಯಾಗಬೇಕು. ಭಕ್ತರು, ಸಾರ್ವಜನಿಕರು ಹಾಗೂ ಮಠದ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕು ಎಂದು ಶ್ರೀಗಳು ಮನವಿ ಮಾಡಿದರು.
**ಸಲಹೆ–ಸೂಚನೆ ನೀಡಿದ ಭಕ್ತರು:** ಸಭೆಯನ್ನುದ್ದೇಶಿಸಿ ಡಾ. ರಾಜೇಂದ್ರ ಗಚ್ಚಿನಮಠ, ಮೃತ್ಯುಂಜಯ ಧಡೇಸೂರಮಠ, ಮುತ್ತಣ್ಣ ಪಲ್ಲೇದ, ಅರುಣ ಕುಲಕರ್ಣಿ, ದೊಡ್ಡಯ್ಯ ಅರವಟಗಿಮಠ, ಮೈಲಾರಪ್ಪ ಚಳ್ಳಮರದ, ಕಳಕಪ್ಪ ಕಳಕೊಂಡನವರ ಸೇರಿದಂತೆ ಹಲವರು ಮಾತನಾಡಿ ಜಾತ್ರಾ ಮಹೋತ್ಸವದ ಯಶಸ್ಸಿಗೆ ಅಗತ್ಯ ಸಲಹೆ□ಸೂಚನೆಗಳನ್ನು ನೀಡಿದರು.
ನರೇಗಲ್ಲ ಹಾಗೂ ಮಜರೆ ಗ್ರಾಮಗಳ ಸದ್ಭಕ್ತರು ಸಭೆಯಲ್ಲಿ ಪಾಲ್ಗೊಂಡು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಈಶ್ವರ ಬೆಟ್ಟಗೇರಿ ಸಭೆಯನ್ನು ನಿರ್ವಹಿಸಿದರು.
**ಭಕ್ತಿಯ ಜಾತ್ರೆ ಪರಂಪರೆಯ ಪಯಣ:** ಒಂಬತ್ತು ದಿನಗಳ ಕಾಲ ನಡೆಯಲಿರುವ ಜಾತ್ರಾ ಮಹೋತ್ಸವದಲ್ಲಿ ಧಾರ್ಮಿಕ ಚಿಂತನೆ, ಪ್ರವಚನ, ಅನ್ನದಾನ, ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಹಿರೇಮಠದ ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಯ ಅನಾವರಣವಾಗಲಿದೆ. ಮಠದ ಭಕ್ತಿ ಪರಂಪರೆಯೊಂದಿಗೆ ಹೊಸ ಪೀಳಿಗೆಯನ್ನೂ ಬೆಸೆಯುವ ಈ ಜಾತ್ರೆ ನರೇಗಲ್ಲಿನ ಜನಮನದಲ್ಲಿ ಮತ್ತೊಂದು ಸ್ಮರಣೀಯ ಅಧ್ಯಾಯ ಬರೆಯುವ ನಿರೀಕ್ಷೆ ಮೂಡಿಸಿದೆ.

# ನಿಮ್ಮ ಗ್ರಾಮದಲ್ಲಿ ಕೆಲಸ ಬೇಕಿದ್ದರೆ ಗ್ರಾಪಂಗೆ ನಮೂನೆ-6 ಸಲ್ಲಿಸಿ

## ರೋಣ ತಾಲೂಕಿನ 22 ಗ್ರಾಪಂಗಳಲ್ಲಿ ನಮೂನೆ-6 ಅಭಿಯಾನ: ತಾಪಂ ಇಒ ಚಂದ್ರಶೇಖರ ಬಿ. ಕಂದಕೂರ ಸಲಹೆ

**ಸತ್ಯಮಿಥ್ಯ ಸುದ್ದಿಮೂಲ ರೋಣ :**
ಬರಗಾಲದ ಸಮಯದಲ್ಲಿ ಕೆಲಸ ಇಲ್ಲಾ ಅಂತಾ ಯಾರೂ ಚಿಂತಗೆ ಒಳಗಾಗಬೇಡಿ ಹಾಗೂ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಉದ್ಯೋಗದ ನಿರೀಕ್ಷೆ ಯಲ್ಲಿರುವ ಕುಟುಂಬಗಳು ನಿಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಮೂನೆ-6 ಸಲ್ಲಿಸುವ ಮೂಲಕ ತಮ್ಮ ಕೆಲಸದ ಬೇಡಿಕೆಯನ್ನು ದಾಖಲಿಸಬಹುದು.

ಈ ಮೂಲಕ ಯಾವ ಕುಟುಂಬಕ್ಕೆ ಕೆಲಸದ ಅವಶ್ಯಕತೆ ಇದೆ ಎಂಬುದು ಅಧಿಕೃತವಾಗಿ ದಾಖಲಾಗಲಿದ್ದು, ಅದರ ಆಧಾರದ ಮೇಲೆ ಉದ್ಯೋಗ ಕಲ್ಪಿಸುವ ಪ್ರಕ್ರಿಯೆ ಕೈಗೊಳ್ಳಲು ಸಾಧ್ಯವಾಗಲಿದೆ ಅಂತಾ ರೋಣ ತಾಲೂಕ ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿಗಳು ಹೇಳಿದರು..

ಹೊಸಳ್ಳಿ ಗ್ರಾಮ ಪಂಚಾಯಿತಿ ಯಲ್ಲಿ ನಡೆಯುತ್ತಿರುವ ಕೆರೆ ಪುನಶ್ಚೇತನ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದ ಅವರು ರೋಣ ತಾಲೂಕಿನ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ವಿಬಿಜಿ-ರಾಮ್-ಜಿ ಯೋಜನೆಯಡಿ ನಮೂನೆ-6 ಅಭಿಯಾನ ನಡೆ-ಯುತ್ತಿದ್ದು, ಗ್ರಾಮೀಣ ಕುಟುಂಬಗಳಿಂದ ಕೆಲಸದ ಬೇಡಿಕೆಗಳನ್ನು ಸಂಗ್ರಹಿಸಲಾಗುತ್ತಿದೆ. ಈ ಅಭಿಯಾನ ಕೇವಲ ಅರ್ಜಿ ಸಂಗ್ರಹಿಸುವ ಕಾರ್ಯವಾಗದೆ, ಉದ್ಯೋಗದ ಅಗತ್ಯವಿರುವ ಕುಟುಂಬಗಳನ್ನು ಗುರುತಿಸಿ, ಅವರಿಗೆ ಲಭ್ಯವಿರುವ ಕಾಮಗಾರಿಗಳಲ್ಲಿ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ನಡೆಯುತ್ತಿದೆ ಎಂದರು..



ವಿಬಿಜಿ-ರಾಮ್-ಜಿ ಯೋಜನೆಯಡಿ ಕೆಲಸ ಪಡೆಯಲು ಮೊದಲು ಕೆಲಸದ ಬೇಡಿಕೆ ಸಲ್ಲಿಸುವುದು ಅಗತ್ಯ. ಗ್ರಾಮದಲ್ಲಿ ಯಾವ ಪ್ರಮಾಣದಲ್ಲಿ ಕಾರ್ಮಿಕರಿಗೆ ಕೆಲಸ ಬೇಕಿದೆ ಎಂಬುದನ್ನು ತಿಳಿದುಕೊಳ್ಳಲು ನಮೂನೆ-6 ಪ್ರಮುಖ ಆಧಾರವಾಗಲಿದೆ. ಇದರ ಮೂಲಕ ಬೇಡಿಕೆಯಿರುವ ಪ್ರದೇಶಗಳಲ್ಲಿ ಅಗತ್ಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕೂಡ ಅನುಕೂಲವಾಗಲಿದೆ ಕೆಲಸ ಸಿಕ್ಕ ಬಳಿಕ ಪ್ರತಿಯೊಬ್ಬ ವ್ಯಕ್ತಿಗೆ 382/ ರೂ ದೊರೆಯಲಿದೆ ಎಂದರು..

**ಕೆರೆ, ನೀರು ಸಂರಕ್ಷಣಾ ಕಾಮಗಾರಿಗಳಿಗೆ ಆದ್ಯತೆ:** ತಾಲೂಕಿನ ಗ್ರಾಮಗಳಲ್ಲಿ ನಡೆಯುತ್ತಿರುವ ಕೆರೆ ಪುನಶ್ಚೇತನ, ಹೂಳೆತ್ತುವಿಕೆ, ನೀರು ಸಂಗ್ರಹಣಾ ವ್ಯವಸ್ಥೆ ಸುಧಾರಣೆ, ಜಲ ಸಂರಕ್ಷಣೆ ಸೇರಿದಂತೆ ಗ್ರಾಮೀಣ ಪ್ರದೇಶಕ್ಕೆ ದೀರ್ಘಕಾಲಿಕವಾಗಿ ಉಪಯೋಗವಾಗುವ ಕಾಮಗಾರಿಗಳಲ್ಲಿ ಸ್ಥಳೀಯರಿಗೆ ಉದ್ಯೋಗ ಕಲ್ಪಿಸುವ ಸಾಧ್ಯತೆ ಇದೆ. ಇದರಿಂದ ಒಂದೆಡೆ ಕೂಲಿ ಕಾರ್ಮಿಕರಿಗೆ ಕೆಲಸ ದೊರೆತರೆ, ಮತ್ತೊಂದೆಡೆ ಗ್ರಾಮದ ಸಾರ್ವಜನಿಕ ಆಸ್ತಿಗಳ ಅಭಿವೃದ್ಧಿಗೂ ವೇಗ ಸಿಗಲಿದೆ.

ಕೆಲಸಕ್ಕಾಗಿ ಬೇರೆ ಊರುಗಳಿಗೆ ತೆರಳುವ ಪರಿಸ್ಥಿತಿ ಎದುರಿಸುತ್ತಿರುವ ಗ್ರಾಮೀಣ ಕುಟುಂಬಗಳಿಗೆ ತಮ್ಮದೇ ಗ್ರಾಮದ ವ್ಯಾಪ್ತಿಯಲ್ಲಿ ಉದ್ಯೋಗ ದೊರೆಯುವಂತೆ ಮಾಡುವುದು ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ವಿಶೇಷವಾಗಿ ಕೃಷಿ ಕೆಲಸ ಕಡಿಮೆ ಇರುವ ಅವಧಿಯಲ್ಲಿ ಕೂಲಿ ಕಾರ್ಮಿಕರಿಗೆ ಸ್ಥಳೀಯವಾಗಿ ಉದ್ಯೋಗ ದೊ-ರೆತರೆ ಕುಟುಂಬಗಳ ಆದಾಯಕ್ಕೆ ನೆರವಾಗಲಿದೆ.

ಕೆಲಸ ಬೇಕಿದ್ದರೂ ಅರ್ಜಿ ಸಲ್ಲಿಸದೆ ಇರುವುದರಿಂದ ಬೇಡಿಕೆಯು ಅಧಿಕೃತವಾಗಿ ದಾಖಲಾಗುವುದಿಲ್ಲ. ಹೀಗಾಗಿ ಉದ್ಯೋಗದ ಅವಶ್ಯಕತೆ ಇರುವ ಕುಟುಂಬಗಳು ಯಾವುದೇ ಮಧ್ಯವರ್ತಿಗಳ ಮೊರೆ ಹೋಗದೆ ನೇರವಾಗಿ ತಮ್ಮ ಗ್ರಾಮ ಪಂಚಾಯಿತಿಗೆ ತೆರಳಿ ನಮೂನೆ-6 ಸಲ್ಲಿಸಿ ಕೆಲಸದ ಬೇಡಿಕೆ ದಾಖಲಿಸಿಕೊಳ್ಳಬೇಕು ಎಂಬ ಸಂದೇಶವನ್ನು ಅಧಿಕಾರಿಗಳು ನೀಡಿದ್ದಾರೆ. ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲೂ ಅಭಿಯಾನಕ್ಕೆ ಹೆಚ್ಚಿನ ಸ್ಪಂದನೆ ದೊರೆಯುವ ನಿರೀಕ್ಷೆಯಿದ್ದು, ಗ್ರಾಮೀಣ ಕುಟುಂಬಗಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಾಲೂಕು ಪಂಚಾಯಿತಿ ವತಿಯಿಂದ ಮನವಿ ಸಹ ಮಾಡಲಾಗಿದೆ. ಈ ಸಂದರ್ಭದಲ್ಲಿ ಖಿಂ ಗುರುಲಿಂಗಯ್ಯ ಹಿರೇಮಠ, BFT ಈರಣ್ಣ ದಳವಾಯಿ ಸೇರಿದಂತೆ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಗೂ ವಿಬಿಜಿ-ರಾಮ್-ಜಿ ಸಿಬ್ಬಂದಿಗಳು ಉಪಸ್ಥಿತರಿದ್ದರು...

# ಕೊಪ್ಪಳ ಲೋಕಾಯುಕ್ತ ಪೊಲೀಸರಿಂದ ಅ.09ರಂದು ಜನ ಸಂಪರ್ಕ ಸಭೆ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ :**
ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಕೊಪ್ಪಳ ಕಛೇರಿಯ ಪೊಲೀಸ್ ಅಧಿಕಾರಿಗಳಿಂದ ಅಕ್ಟೋಬರ್ 09 ರ ಶುಕ್ರವಾರದಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1:30 ಗಂಟೆಯವರೆಗೆ ಯಲಬುರ್ಗಾದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಸಾರ್ವಜನಿಕ ಕುಂದು-ಕೊರತೆಗಳ ಅಹವಾಲು ಸ್ವೀಕರಿಸುವ ಪ್ರಯುಕ್ತ ಸಭೆಗೆ ಸರ್ಕಾರದ ಎಲ್ಲ ಕಚೇರಿಗಳ ತಾಲೂಕುಮಟ್ಟದ ಸರಕಾರಿ ಅಧಿಕಾರಿಗಳು ಹಾಜರಿರುತ್ತಾರೆ. ಆದ್ದರಿಂದ ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು, ಅಹವಾಲುಗಳನ್ನು ಹಾಗೂ ತಮ್ಮ ಸರಕಾರಿ ಕೆಲಸಗಳಿಗೆ ಸಂಬಂಧಿಸಿದಂತೆ ಯಾವುದೇ ಸರಕಾರಿ ಕಛೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ, ಸರಕಾರಿ ಅಧಿಕಾರಿಗಳು ಸರಕಾರದ ಯೋಜನೆಗಳ ಲಾಭವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಉದ್ದೇಶ ಪೂರ್ವಕ ತಾರತಮ್ಯ ಮಾಡುತ್ತಿರುವ ಬಗ್ಗೆ, ಕಳಪೆ ಕಾಮಗಾರಿ ನಡೆಸಿ ಹಣ ದುರುಪಯೋಗ ಪಡಿಸಿದ ದೂರುಗಳ ಬಗ್ಗೆ, ಯಾವುದೇ ಸರಕಾರಿ ಅಧಿಕಾರಿಯು ತಾನು ಕರ್ತವ್ಯ ನಿರ್ವಹಿಸಲು ನಿಯೋಜಿಸಿದ ಕರ್ತವ್ಯವನ್ನು ನಿರ್ವಹಿಸುವಲ್ಲಿ ದುರಾಡಳಿತ ಪ್ರದರ್ಶಿಸುವಂತಹ ಅಧಿಕಾರಿಗಳ ಮೇಲೆ ಲಿಖಿತ ದೂರನ್ನು ದಾಖಲಿಸಬಹುದು.

ಪ್ರಪತ್ರ 1 ಮತ್ತು 2 ರಲ್ಲಿ ಅಫಿಡವಿಟ್‌ನೊಂದಿಗೆ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ ಲಿಖಿತ ದೂರನ್ನು ಸಲ್ಲಿಸಬಹುದಾಗಿದೆ. ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇರುವಂತಹ ಪ್ರಕರಣಗಳಿಗೆ ಸಂಬಂಧಿಸಿದ ದೂರುಗಳಿದ್ದಲ್ಲಿ ಸ್ವೀಕರಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಾಯುಕ್ತ ಕೊಪ್ಪಳ ಕಚೇರಿಯ ಪೊಲೀಸ್ ಉಪಾಧೀಕ್ಷಕರಾದ ವಿಜಯ ಬಿರಾದಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ನಗರಕ್ಕೆ ವಿಜಯೇಂದ್ರ ಯಡಿಯೂರಪ್ಪ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ :**
ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಸಾರ್ಥಕ ಸಮಾಜ ಸೇವೆಯ 25 ವರ್ಷಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ, ರೋಣ ಮತಕ್ಷೇತ್ರದಲ್ಲಿ ಅಕ್ಟೋಬರ್ 7ರ ಬುಧವಾರದಂದು 'ಸೇವಾ ಸಂಕಲ್ಪ ಅಭಿಯಾನ' ಹಾಗೂ 'ಬೂತ್ ವಿಜಯ ಸಂಕಲ್ಪ ಯಾತ್ರೆ' ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಬಿಜೆಪಿ ರೋಣ ಮಂಡಲ ಅಧ್ಯಕ್ಷ ಉಮೇಶ ಮಲ್ಲಾಪುರ ತಿಳಿಸಿದ್ದಾರೆ.

**ಅಕ್ಟೋಬರ್ 7 ರಂದು ಬಿಜೆಪಿ 'ಸೇವಾ ಸಂಕಲ್ಪ ಅಭಿಯಾನ' ಹಾಗೂ 'ಬೂತ್ ವಿಜಯ ಸಂಕಲ್ಪ ಯಾತ್ರೆ'**

ಅಂದು ಮಧ್ಯಾಹ್ನ 3:00 ಗಂಟೆಗೆ ಕಾರ್ಯಕ್ರಮ ಚಾಲನೆಗೊಳ್ಳಲಿದ್ದು, ಇದರ ಅಂಗವಾಗಿ ರೈತರೊಂದಿಗೆ ವಿಶೇಷ ಸಂವಾದ ಹಾಗೂ ಬೂತ್ ವಿಜಯ ಸಂಕಲ್ಪ ಕಾರ್ಯಕ್ರಮಗಳು ನಡೆಯಲಿವೆ.

ಈ ಬೃಹತ್ ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ. ವಿಜಯೇಂದ್ರ, ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವರಾದ ಕಳಕಪ್ಪ ಬಂಡಿ ಸೇರಿದಂತೆ ಪಕ್ಷದ ಪ್ರಮುಖ ನಾಯಕರು, ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

# ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಭಾರತ ಪಾಕಿಸ್ತಾನದಲ್ಲಿ ವಿಲೀನ: ಸಿ.ಸಿ. ಪಾಟೀಲ್ ಲೇವಡಿ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ದೇಶದ ಚುಕ್ಕಾಣಿ ಕಾಂಗ್ರೆಸ್ ಕೈಗೆ ಸಿಕ್ಕರೆ ಭಾರತ ಮರಳಿ ಪಾಕಿಸ್ತಾನಕ್ಕೆ ವಿಲೀನವಾಗುತ್ತದೆ ಎಂದು ಮಾಜಿ ಸಚಿವ ಸಿ.ಸಿ. ಪಾಟೀಲ್ ಲೇವಡಿ ಮಾಡಿದ್ದಾರೆ.



ಗದಗದಲ್ಲಿ ನಡೆದ ರಾಮಕೃಷ್ಣ ಹೆಗಡೆ ಅವರ ಜನ್ಮ ಶತಮಾನೋತ್ಸವ ಕಾರ್ಯಕ್ರಮದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಮ್ಮ ವೈಫಲ್ಯಗಳನ್ನು ಮರೆಮಾಚಲು ಎಸ್‌ಐಆರ್, ಇವಿಎಂ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ಮಾತನಾಡುತ್ತಿದ್ದಾರೆ ಎಂದು ಆರೋಪಿಸಿದರು.

ಬರ ಪರಿಹಾರವಾಗಿ ರೈತರಿಗೆ 2,500 ರೂಪಾಯಿ ನೀಡುವುದಾಗಿ ಬೃಹತ್ ಘೋಷಣೆ ಮಾಡಿದ್ದಾರೆ. ಇದು ಜಗತ್ತಿನ 8ನೇ ಅದ್ಭುತ. ಇದೊಂದು ರೈತಪರ ಸರ್ಕಾರವೇ ಎಂದು ಟೀಕಿಸಿದ ಅವರು, ಡಿ.ಕೆ. ಶಿವಕುಮಾರ್ ಅವರ ಆಡಳಿತ ವೈಫಲ್ಯ ಕಂಡಿದೆ. ಸರ್ಕಾರಿ ವಿಮಾನ ಟೇಕ್ ಆಫ್ ಆಗುವ ಹಂತದಲ್ಲಿಲ್ಲ, ಇನ್ನೂ ರನ್-ವೇನಲ್ಲೇ ಬಂದು ನಿಂತಿದೆ ಎಂದು ವ್ಯಂಗ್ಯವಾಡಿದರು.

ಇದೇ ವೇಳೆ ಇವಿಎಂ ಮತ್ತು ಎಸ್‌ಐಆರ್ ವಿಚಾರವಾಗಿ ಕಾಂಗ್ರೆಸ್ ಎತ್ತುತ್ತಿರುವ ಅಪಸ್ವರಗಳ ಬಗ್ಗೆ ಪ್ರಶ್ನಿಸಿದ ಅವರು, "ಕಾಂಗ್ರೆಸ್ ಪಕ್ಷಕ್ಕೆ 133 ಸ್ಥಾನಗಳು ಬಂದಾಗ ಇವಿಎಂ ಮಷಿನ್ ಸರಿಯಾಗಿ ಕೆಲಸ ಮಾಡುತ್ತಿತ್ತಾ? ಸಂಸತ್ ಚುನಾವಣೆಯಲ್ಲಿ ಸೋತಾಗ ಸರಿ ಇರಲಿಲ್ಲವೇ?" ಎಂದು ಕಿಡಿಕಾರಿದರು. ರಾಜ್ಯ ಸರ್ಕಾರಕ್ಕೆ ಆಲೋಚನಾ ಶಕ್ತಿ ಇರಬೇಕು. ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳಿಗೂ ಎಲ್ಲವೂ ತಿಳಿದಿರುವುದಿಲ್ಲ, ಅದಕ್ಕಾಗಿ ತಾಂತ್ರಿಕ ಸಿಬ್ಬಂದಿ ಸಮಿತಿಯನ್ನು ಇಟ್ಟುಕೊಳ್ಳಬೇಕು ಎಂದು ಸಲಹೆ ನೀಡಿದರು.

# ವಿಶ್ವವಿಖ್ಯಾತ ಮೈಸೂರು ದಸರಾ-2026 ಉದ್ಘಾಟಿಸಲು ಕೊಪ್ಪಳದ ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿ ಅವರಿಗೆ ಮೈಸೂರು ಜಿಲ್ಲಾಡಳಿತದಿಂದ ಆಹ್ವಾನ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ :**
ಮೈಸೂರು ಜಿಲ್ಲಾಧಿಕಾರಿಗಳು ಹಾಗೂ ದಸರಾ ಮಹೋತ್ಸವದ ವಿಶೇಷಾಧಿಕಾರಿಗಳಾದ ಲಕ್ಷ್ಮಿಕಾಂತ ರೆಡ್ಡಿ ಜಿ ಅವರು ಉತ್ಸವದ ಸ್ವಾಗತ ಸಮಿತಿಯೊಂದಿಗೆ ಅಕ್ಟೋಬರ್ 4 ರಂದು ಕೊಪ್ಪಳದ ಗವಿಮಠಕ್ಕೆ ತೆರಳಿ ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿ ಅವರಿಗೆ ಭೇಟಿ ಮಾಡಿ ದಸರಾ ಕಾರ್ಯಕ್ರಮವನ್ನು ಉದ್ಘಾಟಿಸಿ ಯಶಸ್ವಿಗೊಳಿಸುವಂತೆ ಗೌರವ ಪೂರ್ವಕವಾಗಿ ಆಹ್ವಾನ ಪತ್ರಿಕೆಯನ್ನು ನೀಡಿದರು.

ಮೈಸೂರಿನಿಂದ ಆಗಮಿಸಿದ ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಡಾ.ವರ್ಣಿತ್ ನೇಗಿ ಅವರೊಂದಿಗೆ ಮಧ್ಯಾಹ್ನ 2 ಗಂಟೆ ವೇಳೆಗೆ ಗವಿಮಠಕ್ಕೆ ಆಗಮಿಸಿದರು.

ವಿಶ್ವವಿಖ್ಯಾತ ಮೈಸೂರು ದಸರಾ 2026ರ ಕಾರ್ಯಕ್ರಮದ ಉದ್ಘಾಟನೆ ಅಕ್ಟೋಬರ್ 11 ರಂದು ನಡೆಯಲಿದೆ. ತಾವು ಕಾರ್ಯಕ್ರಮಕ್ಕೆ ಆಗಮಿಸಿ ದಸರಾ ಉತ್ಸವವನ್ನು ಉದ್ಘಾಟಿಸಬೇಕು ಎಂದು ದಸರಾ ಮಹೋತ್ಸವದ ಸ್ವಾಗತ ಸಮಿತಿಯಿಂದ ಆಹ್ವಾನ ಪತ್ರಿಕೆಯನ್ನು ನೀಡುತ್ತಿದ್ದೇವೆ ಎಂದು ಇದೆ ವೇಳೆ ಮೈಸೂರು ಜಿಲ್ಲಾಧಿಕಾರಿಗಳಾದ ಲಕ್ಷ್ಮಿಕಾಂತ ರೆಡ್ಡಿ ಜಿ ಅವರು ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿ ಅವರಿಗೆ ತಿಳಿಸಿದರು.

ಮೈಸೂರು ಜಿಲ್ಲಾಧಿಕಾರಿಗಳು ಹಾಗೂ ಸ್ವಾಗತ ಸಮಿತಿಯ ಸದಸ್ಯರಾದ ಮೈಸೂರು ಜಿಲ್ಲಾ ಪಂಚಾಯತ್ ಸಿಇಓ ಯುಕೇಶ ಕುಮಾರ, ಶ್ರೀ ಚಾಮುಂಡೇಶ್ವರಿ ಬೆಟ್ಟದ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ.ರೂಪಾ, ಉಪ ಕಾರ್ಯದರ್ಶಿ ಎಂ ಬಸವರಾಜ ಅವರು ಶ್ರೀ ಗವಿಸಿದ್ದೇಶ್ವರ ಸ್ವಾಮೀಜಿ ಅವರಿಗೆ ಫಲ ಪುಷ್ಪ ನೀಡಿ ಸನ್ಮಾನಿಸಿದರು.



ಪ್ರಸಾದ ವ್ಯವಸ್ಥೆ: ಗವಿಮಠಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಪ್ರಸಾದವನ್ನು ಸ್ವೀಕರಿಸಬೇಕು ಎಂದು ಶ್ರೀ ಗವಿಸಿದ್ದೇಶ್ವರ ಶ್ರೀಗಳು ಮೈಸೂರು ಜಿಲ್ಲಾಧಿಕಾರಿಗಳು ಹಾಗೂ ಸ್ವಾಗತ ಸಮಿತಿಯ ಸದಸ್ಯರಿಗೆ ಆಹ್ವಾನ ನೀಡಿದರು. ಜಿಲ್ಲಾಧಿಕಾರಿಗಳಾದ ಲಕ್ಷ್ಮಿಕಾಂತ ರೆಡ್ಡಿ ಜಿ, ಮೈಸೂರು ಜಿಪಂ ಸಿಇಓ ಯುಕೇಶ ಕುಮಾರ ಅವರು ಗವಿಮಠದ ಪ್ರಸಾದ ನಿಲಯಕ್ಕೆ ತೆರಳಿ ಕೊಪ್ಪಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಇಓ ಅವರೊಂದಿಗೆ ಗವಿಮಠದಲ್ಲಿ ಪ್ರಸಾದ ಸ್ವೀಕರಿಸಿದರು. ಪ್ರಸಾದ ಸೇವನೆ ಬಳಿಕ ಲಕ್ಷ್ಮಿಕಾಂತ ರೆಡ್ಡಿ ಜಿ ಹಾಗೂ ಸಿಇಓ ಯುಕೇಶ ಕುಮಾರ ಅವರು ಗವಿಮಠದ ಬೆಟ್ಟ ಏರಿ ಕರ್ತೃ ಗದ್ದುಗೆಯ ದರ್ಶನ ಪಡೆದು-ಕೊಂಡರು.

**ಜಿಲ್ಲಾಧಿಕಾರಿಗಳಿಂದ ಹರ್ಷ:** ಗವಿಮಠಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಮೈಸೂರು ಜಿಲ್ಲಾಧಿಕಾರಿಗಳಾದ ಲಕ್ಷ್ಮಿಕಾಂತ ರೆಡ್ಡಿ ಜಿ ಹಾಗೂ ಸ್ವಾಗತ ಸಮಿತಿಯ ಸದಸ್ಯರು ಗವಿಮಠದ ಹಸಿರು ಆವರಣ ಹಾಗೂ ಸ್ವಚ್ಛಂದ ಪರಿಸರವನ್ನು ಕಂಡು ಹರ್ಷ ವ್ಯಕ್ತಪಡಿಸಿದರು. ಶ್ರೀ ಗವಿಸಿದ್ದೇಶ್ವರ ಜಾತ್ರೆಯ ಜನಸಾಗರ ಮತ್ತು ಧಾರ್ಮಿಕ ಮಹತ್ವದಿಂದಾಗಿ ದಕ್ಷಿಣ ಭಾರತದ ಕುಂಬ ಮೇಳ ಎಂದೇ ಕರೆಯುವ ಗವಿಮಠದ ಜಾತ್ರೋತ್ಸವದ ಚಿತ್ರಾವಳಿಗಳನ್ನು ವೀಕ್ಷಿಸಿ ಸಂತಷ ವ್ಯಕ್ತಪಡಿಸಿದರು. ಲಕ್ಷಾಂತರ ಸಂಖ್ಯೆಯಲ್ಲಿ ಜನರು ದವಸ-ಧಾನ್ಯಗಳೊಂದಿಗೆ ಜಾತೆ-್ರಗೆ ಆಗಮಿಸಿ ವಿಶೇಷವಾಗಿ ನಡೆಯುವ ಗವಿಮಠದ ಜಾತ್ರೆಯ ಬಗ್ಗೆ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಇಟ್ನಾಳ ಅವರು ಮೈಸೂರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

# ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳು ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ: ಡಿಸಿ

**ಸತ್ಯಮಿಥ್ಯ ಸುದ್ದಿಮೂಲ ಗದಗ:**

2026-27 ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳು ಹುಟ್ಟುವಳಿ ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ 2026-27 ನೇ ಸಾಲಿನ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಹೆಸರುಕಾಳು ಖರೀದಿಸುವ ಕುರಿತು ಜಿಲ್ಲಾ ಟಾಸ್ಕ್ ಫೋರ್ಸ ಸಮಿತಿಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ತೆರೆಯಲಾಗುವ ಹೆಸರುಕಾಳು ಹುಟ್ಟುವಳಿ ಖರೀದಿ ಕೇಂದ್ರಗಳಲ್ಲಿ ಖರೀದಿಸಲಾಗುವ ಎಫ್. ಎ ಕ್ಯೂ ಗುಣಮಟ್ಟ ಪರಿಶೀಲನೆಗೆ ಗ್ರೇಡರ್‌ಗಳನ್ನು ನೇಮಕ ಮಾಡಬೇಕು ಮತ್ತು ಅವರಿಗೆ ಎಫ್‌ಎಕ್ಯೂ ಗ್ರೇಡಿಂಗ್ ತರಬೇತಿ ನೀಡಬೇಕು. ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 04 ಕ್ವಿಂಟಾಲ್ ಗರಿಷ್ಟ



ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಟ 20 ಕ್ವಿಂಟಾಲ್ ಹೆಸರುಕಾಳು ಖರೀದಿಸಬೇಕು. ಬೆಂಬಲ ಬೆಲೆಯಲ್ಲಿ ಹೆಸರು ಕಾಳು ಹುಟ್ಟುವಳಿ ಖರೀದಿಯ ಕುರಿತು ರೈತರಿಗೆ ತಿಳುವಳಿಕೆ ನೀಡಲು ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಜಿಲ್ಲಾಕಾರಿ ಸಿ.ಎನ್.ಶ್ರೀಧರ್ ಸೂಚಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರಾದ ಸುಧಾ ಆರ್ ಬಂಡಿ ಅವರು ಮಾತನಾಡಿ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳು ಹುಟ್ಟುವಳಿಗೆ ಪ್ರತಿ ಕ್ವಿಂಟಾಲ್‌ಗೆ 8780 ರೂ ಗಳಂತೆ ನಿಗದಿಪಡಿಸಲಾಗಿದೆ. ಸರ್ಕಾರದ ಆದೇಶದನುಸಾರ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸದರಿ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗದಿಪಡಿಸಿದ್ದು, ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಸಹ ಪ್ರಾರಂಭಿಸಿ, ರಾಜ್ಯದಲ್ಲಿ ಮಾರ್ಕಫೆಡ್ ಸಂಸ್ಥೆಯ ಮೂಲಕ ಖರೀದಿಸಲು ಆದೇಶಿಸಲಾಗಿರುತ್ತದೆ ಎಂದು ತಿಳಿಸಿದರು. ಜಿಲ್ಲೆಯ 59 ಕಡೆಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಯಿತು. ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ತೋಟಗಾರಿಕೆ ಇಲಾಖೆ, ಸಹಕಾರಿ ಸಂಘಗಳ ಇಲಾಖೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ಸಿಎಂ ಡಿಕೆಶಿ ಜನರ ಕ್ಷಮೆ ಕೇಳಲಿ: ಉಮೇಶ ಚನ್ನು ಪಾಟೀಲ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ನಾಡಿನ ಮಠಾಧೀಶರ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಹಗುರವಾಗಿ ಮಾತನಾಡಿರುವುದು ಭಕ್ತರ ಭಾವನೆಗಳಿಗೆ ನೋವುಂಟು ಮಾಡಿದೆ. ಆದ್ದರಿಂದ ಮುಖ್ಯಮಂತ್ರಿ ಅವರು ತಮ್ಮ ಹೇಳಿಕೆಗೆ ಸ್ಪಷ್ಟನೆ ನೀಡಿ, ನಾಡಿನ ಜನರಲ್ಲಿ ಕ್ಷಮೆ ಕೇಳಬೇಕು ಎಂದು ಬಿಜೆಪಿ ಮುಖಂಡ ಉಮೇಶ ಚನ್ನು ಪಾಟೀಲ ಆಗ್ರಹಿಸಿದರು.



ಮಠಾಧೀಶರು ಧಾರ್ಮಿಕ ಕ್ಷೇತ್ರದ ಜೊತೆಗೆ ಸಾಮಾಜಿಕ ಸೇವೆಯಲ್ಲಿಯೂ ಮಹತ್ವದ ಕೊಡುಗೆ ನೀಡುತ್ತಿದ್ದಾರೆ. ಶಿಕ್ಷಣ, ಆರೋಗ್ಯ, ಅನ್ನದಾಸೋಹ, ಬಡವರ ನೆರವು ಸೇರಿದಂತೆ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಅನೇಕ ಮಠಗಳು ನಿರಂತರವಾಗಿ ಜನಪರ ಕಾರ್ಯಗಳನ್ನು ಕೈಗೊಳ್ಳುತ್ತಿವೆ. ಸರ್ಕಾರದ ವ್ಯವಸ್ಥೆಗಳ ಮೂಲಕ ನಡೆಯುವ ಸೇವೆಗಳಿಗೆ ಪೂರಕವಾಗಿ ಮಠಮಾನ್ಯಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನೆರವಾಗುತ್ತಿವೆ ಎಂದು ಅವರು ಹೇಳಿದರು.

ನಾಡಿನ ಕೋಟ್ಯಂತರ ಭಕ್ತರು ಮಠಾಧೀಶರ ಬಗ್ಗೆ ಅಪಾರ ಗೌರವ ಹಾಗೂ ಭಕ್ತಿಭಾವ ಹೊಂದಿದ್ದಾರೆ. ಇಂತಹ ಸಂದರ್ಭದಲ್ಲಿ ಮಠಾಧೀಶರ ಕುರಿತು ಮುಖ್ಯಮಂತ್ರಿಗಳು ಹಗುರವಾಗಿ ಮಾತನಾಡಿರುವುದು ಭಕ್ತರ ಮನಸ್ಸಿಗೆ ನೋವುಂಟು ಮಾಡಿದೆ ಎಂದು ಉಮೇಶ ಪಾಟೀಲ ಆರೋಪಿಸಿದರು.

ಜನರ ನಂಬಿಕೆ, ಧಾರ್ಮಿಕ ಭಾವನೆ ಹಾಗೂ ಮಠಮಾನ್ಯಗಳ ಸಾಮಾಜಿಕ ಕೊಡುಗೆಯನ್ನು ಗೌರವಿಸುವ ಜವಾಬ್ದಾರಿ ಸರ್ಕಾರದ ಮುಖ್ಯಸ್ಥರ ಮೇಲಿದೆ. ಯಾವುದೇ ಹೇಳಿಕೆಯಿಂದ ಭಕ್ತರಲ್ಲಿ ಗೊಂದಲ ಅಥವಾ ನೋವು ಉಂಟಾಗಿದ್ದರೆ ಅದನ್ನು ನಿವಾರಿಸುವುದು ಮುಖ್ಯಮಂತ್ರಿಗಳ ಕರ್ತವ್ಯವಾಗಿದೆ. ಹೀಗಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ತಮ್ಮ ಹೇಳಿಕೆಯ ಕುರಿತು ಸ್ಪಷ್ಟನೆ ನೀಡಿ, ಭಕ್ತರಲ್ಲಿ ಉಂಟಾಗಿರುವ ನೋವಿಗೆ ಕ್ಷಮೆ ಕೋರಬೇಕು ಎಂದು ಅವರು ಒತ್ತಾಯಿಸಿದರು

ಸತ್ಯಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ
SATY MITHI
Kannada Daily Morning

## ಉಪ್ಪಾರ ಸಮಾಜದಿಂದ ನೂತನ ಡಿಸಿಸಿ ಅಧ್ಯಕ್ಷರಿಗೆ ಸನ್ಮಾನ

**ಸತ್ಯಮಿಥ್ಯ ಸುದ್ದಿಮೂಲ ಗಂಗಾವತಿ:**
ಕೊಪ್ಪಳ ಜಿಲ್ಲಾ ಕಾಂಗ್ರೆಸ್ ನೂತನ ಸಾರಥಿಯಾಗಿ ಅಧಿಕಾರ ವಹಿಸಿಕೊಂಡ ಮಾಜಿ ಸಚಿವ ಕೊಪ್ಪಳ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ನಾಗಪ್ಪರವರಿಗೆ ಗಂಗಾವತಿ ತಾಲೂಕು ಉಪ್ಪಾರ ಸಮಾಜದಿಂದ ಸನ್ಮಾನಿಸಲಾಯಿತು.

ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ನಿಮ್ಮ ಅವಧಿಯಲ್ಲಿ ಸದೃಢವಾಗಲಿ, ನೆಪಥ್ಯಕ್ಕೆ ಸರಿದ ಕಾರ್ಯಕರ್ತರನ್ನು ಗುರತಿಸಿ ಪಕ್ಷ ಬಲವರ್ದನೆಗೆ ಶ್ರಮಿಸಿ ಎಂದು ಸಮಾಜದ ಹಿರಿಯರು ಹಾರೈಸಿದರು.

ಈ ಸಂದರ್ಭದಲ್ಲಿ ಉಪ್ಪಾರ ಸಮಾಜದ ತಾಲೂಕು ಅಧ್ಯಕ್ಷ ಅಮರಜ್ಯೋತಿ ವೆಂಕಟೇಶ್, ಕಾಯಾಧ್ಯಕ್ಷ ಮುಕ್ಕಣ್ಣ ಮಾನಳ್ಳಿ, ನಗರಸಭೆ ಮಾಜಿ ಅಧ್ಯಕ್ಷ ದಾನಪ್ಪ ದರೋಜಿ, ಹಿರಿಯರಾದ ರಾಮಣ್ಣ ಕುರಿತಲೆ, ವಾಸುದೇವ ಜಂಬಣ್ಣ, ಹುಲಿಗಿ ಯಂಕಪ್ಪ, ವಿಐಪಿ ಮೆಲೋಡಿಸ್ ಪಂಪಾಪತಿ ಇಂಗಳಗಿ, ಪ್ರಭುವಕೀಲರು, ಶರಣಪ್ಪ ಮಿಣಜಿಗಿ ವಕೀಲರು, ಮಾನಳ್ಳಿ ಹನುಮಂತಪ್ಪ, ಸಮಾಜದ ಉಪಾಧ್ಯಕ್ಷ ಗೋವಿಂದಪ್ಪ ಹುಲಿಗಿ, ಪ್ರಮುಖರಾದ ಯಂಕಪ್ಪ ಕೊಂಡಿಕಾರ ಇತರರಿದ್ದರು.



## ಜನರಿಂದ ನಾನು ಮೇಲೆ ಬಂದೆ' ಚಿತ್ರ ಅಕ್ಟೋಬರ್ 16ಕ್ಕೆ ಬಿಡುಗಡೆ

**ಸತ್ಯಮಿಥ್ಯ ಸುದ್ದಿಮೂಲ ಬೆಂಗಳೂರು:**
ಶ್ರೀ ಮಂಜುನಾಥ ಫಿಲ್ಮ್ಸ್ ಲಾಂಛನದಲ್ಲಿ ನಿರ್ಮಾಣವಾಗಿರುವ, ನವಿಲುಗರಿ ನವೀನ್ ಪಿ.ಬಿ. ನಿರ್ದೇಶನದ 'ಜನರಿಂದ ನಾನು ಮೇಲೆ ಬಂದೆ' ಕನ್ನಡ ಚಲನಚಿತ್ರವು ಅಕ್ಟೋಬರ್ 16ರಂದು ರಾಜ್ಯಾದ್ಯಂತ ಚಿತ್ರಮಂದಿರಗಳಲ್ಲಿ ತೆರೆಕಾಣಲಿದೆ.

ನೃತ್ಯವನ್ನೇ ತನ್ನ ಉಸಿರಾಗಿಸಿಕೊಂಡ ಯುವಕನೊಬ್ಬನ ಜೀವನದ ನೈಜ ಘಟನೆಗಳನ್ನು ಆಧರಿಸಿ ಈ ಸಿನಿಮಾ ರೂಪಿಸಲಾಗಿದೆ.

'ಡ್ಯಾನ್ಸ್ ರಾಜಾ ಡ್ಯಾನ್ಸ್' ಖ್ಯಾತಿಯ ಹಿರಿಯ ನಟ ವಿನೋದ್‌ರಾಜ್ ಅವರು ಸುದೀರ್ಘ ವಿರಾಮದ ನಂತರ ಈ ಚಿತ್ರದ ಮೂಲಕ ಮತ್ತೆ ಬೆಳ್ಳಿಪರದೆಯಲ್ಲಿ ಕಾಣಿಸಿಕೊಳ್ಳುತ್ತಿರುವುದು ಚಿತ್ರದ ಮುಖ್ಯ ಆಕರ್ಷಣೆ.

ತಾರಾಗಣದಲ್ಲಿ ಗಂಧರ್ವರಾಜ್ ಶಂಕರ್ ನಾಯಕನಾಗಿ ನಟಿಸಿದ್ದು, ಅಭಿಜಿತ್, ನವಿಲುಗರಿ ನವೀನ್ ಪಿ.ಬಿ, ಶೈಲಜಾ ದ್ವಾರಕೀಶ್, ಸಂದೀಪ್ ಮಲಾನಿ, ಚಾಮರಾಜ ಮಾಸ್ಟರ್, ಶಿವಕುಮಾರ್ ಆರಾಧ್ಯ ಸೇರಿದಂತೆ ವಿಶಾಲವಾದ ಕಲಾವಿದರ ಬಳಗ ಚಿತ್ರದಲ್ಲಿದೆ.

ಬೆಂಗಳೂರು ಹಾಗೂ ಮೇಲುಕೋಟೆಯ ರಮಣೀಯ ತಾಣಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ. ಪ್ರಣವ್ ಸತೀಶ್ ಸಂಗೀತ ನಿರ್ದೇಶನದಲ್ಲಿ ಮೂಡಿಬಂದಿರುವ ಒಟ್ಟು ಐದು ಹಾಡುಗಳಿಗೆ ಪೃಥ್ವಿರಾಜ್ ಸಂಕಿ, ಭುವನ್ ಮತ್ತು ನವೀನ್ ಪಿ.ಬಿ ಸಾಹಿತ್ಯ ರಚಿಸಿದ್ದಾರೆ.

ಗೌತಮ್ ಟಿ.ಆರ್. ಛಾಯಾಗ್ರಹಣ ಹಾಗೂ ಸಂಕಲನದ ಹೊಣೆ ಹೊತ್ತಿದ್ದು, ಶ್ರೀಮತಿ ಹೇಮಾವತಿ ಬಿ. ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ. ವಿಭಿನ್ನ ಕಥಾಹಂದರ ಹೊಂದಿರುವ ಈ ಚಿತ್ರವನ್ನು ಚಿತ್ರಮಂದಿರಗಳಲ್ಲಿ ವೀಕ್ಷಿಸಿ ಪ್ರೋತ್ಸಾಹಿಸುವಂತೆ ನಿರ್ದೇಶಕರು ಹಾಗೂ ಚಿತ್ರತಂಡ ಮನವಿ ಮಾಡಿದೆ.



# ಜನರ ಬಾಗಿಲಿಗೆ ಸರ್ಕಾರ; ಸಮಸ್ಯೆಗಳಿಗೆ ತ್ವರಿತ ಪರಿಹಾರ: ಕಾಶಪ್ಪನವರ

### ಜನರ ಅಹವಾಲುಗಳಿಗೆ ಸ್ಥಳದಲ್ಲೇ ಪರಿಹಾರದ ಭರವಸೆ : ಬಾಗಿಲಿಗೆ ಬಂತು ಸರ್ಕಾರ – ಅಹವಾಲುಗಳಿಗೆ ಸಿಗಲಿ ಪರಿಹಾರ

**ಸತ್ಯಮಿಥ್ಯ ಸುದ್ದಿಮೂಲ ಬಾಗಲಕೋಟೆ:**
ಸರ್ಕಾರದ ವಿವಿಧ ಯೋಜನೆಗಳು ಹಾಗೂ ಇಲಾಖೆಗಳ ಸೌಲಭ್ಯಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಉದ್ದೇಶದಿಂದ ಪ್ರಜಾ ಸೇವಾ ಆಂದೋಲನ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರ ಸಮಸ್ಯೆಗಳನ್ನು ಒಂದೇ ವೇದಿಕೆಯಲ್ಲಿ ಸಂಬಂಧಿಸಿದ ಅಧಿಕಾರಿಗಳ ಸಮ್ಮುಖದಲ್ಲಿ ಆಲಿಸಿ, ಸಾಧ್ಯವಾದಷ್ಟು ಸ್ಥಳದಲ್ಲಿಯೇ ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ವಿಜಯಾನಂದ ಕಾಶಪ್ಪನವರ ಹೇಳಿದರು.

ಜಮಖಂಡಿ ನಗರದ ಬಸವ ಭವನದಲ್ಲಿ ನಡೆದ 'ಪ್ರಜಾ ಸೇವಾ ಆಂದೋಲನ�ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರವು ಜನರ ಹಕ್ಕುಗಳು ಹಾಗೂ ಅಗತ್ಯ ಸೇವೆಗಳನ್ನು ತ್ವರಿತವಾಗಿ ಒದಗಿಸುವ ಉದ್ದೇಶದಿಂದ ಜಿಲ್ಲಾ, ತಾಲೂಕು ಹಾಗೂ ಗ್ರಾಮೀಣ ಮಟ್ಟದಲ್ಲಿ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ.

ಬಾಗಲಕೋಟೆ ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ 4,526 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, ಅವುಗಳಲ್ಲಿನ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸರ್ಕಾರ ವಿವಿಧ ಯೋಜನೆಗಳನ್ನು ಜಾರಿಗೊಳಿಸುತ್ತಿದೆ. ಯುವಕರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ನೆರವಾಗುವ ಯುವನಿಧಿ ಸೇರಿದಂತೆ ವಿವಿಧ ಜನಪರ ಯೋಜನೆಗಳ ಸದುಪಯೋಗವನ್ನು ಅರ್ಹ ಫಲಾನುಭವಿಗಳು ಪಡೆದುಕೊಳ್ಳಬೇಕು ಎಂದು ಹೇಳಿದರು.

ಜಮಖಂಡಿ ಶಾಸಕ ಜಗದೀಶ ಗುಡಗುಂಟಿ ಮಾತನಾಡಿ, ಸಾರ್ವಜನಿಕರು ರಸ್ತೆ, ಸರ್ಕಾರಿ ಆಸ್ಪತ್ರೆ, ಕುಡಿಯುವ ನೀರು ಸೇರಿದಂತೆ ವಿವಿಧ ಸಮಸ್ಯೆಗಳನ್ನು ತಮ್ಮ ಗಮನಕ್ಕೆ ತರುತ್ತಿದ್ದಾರೆ. ಅವುಗಳನ್ನು ಬಗೆಹರಿಸಲು ಅಧಿಕಾರಿಗಳೊಂದಿಗೆ ನಿರಂತರವಾಗಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದರು.

ಪ್ರಜಾ ಸೇವಾ ಆಂದೋಲನದಂತಹ ಕಾರ್ಯಕ್ರಮಗಳಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಒಂದೇ ಸ್ಥಳದಲ್ಲಿ ಲಭ್ಯವಿರುವುದರಿಂದ ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ನೇರವಾಗಿ ಅಧಿಕಾರಿಗಳ ಮುಂದಿಟ್ಟು ಪರಿಹಾರ ಪಡೆಯಲು ಅವಕಾಶ ದೊರೆಯುತ್ತದೆ. ಸರ್ಕಾರ ಜನರ ಪರವಾಗಿ ಕಾರ್ಯನಿರ್ವಹಿಸುತ್ತಿದ್ದು, ಗ್ರಾಮೀಣ ಪ್ರದೇಶದ ಜನರಿಗೆ ಸರ್ಕಾರದ ಯೋಜನೆಗಳು ಹಾಗೂ ಸೌಲಭ್ಯಗಳು ಸಮರ್ಪಕವಾಗಿ ತಲುಪುವಂತೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.




ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ವಿವಿಧ ಇಲಾಖೆಗಳ ವ್ಯಾಪ್ತಿಯ ಸಮಸ್ಯೆಗಳ ಕುರಿತು ಅರ್ಜಿಗಳನ್ನು ಸ್ವೀಕರಿಸಲಾಯಿತು. ಕಂದಾಯ, ಗ್ರಾಮೀಣಾಭಿವೃದ್ಧಿ, ಕುಡಿಯುವ ನೀರು, ರಸ್ತೆ, ಆರೋಗ್ಯ ಹಾಗೂ ವಿವಿಧ ಸರ್ಕಾರಿ ಯೋಜನೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಅಧಿಕಾರಿಗಳಿಗೆ ಅಹವಾಲು ಸಲ್ಲಿಸಿದರು.

ಸಾರ್ವಜನಿಕರು ನೇರವಾಗಿ ತಮ್ಮ ಸಮಸ್ಯೆಗಳನ್ನು ಸಂಬಂಧಿಸಿದ ಅಧಿಕಾರಿಗಳ ಮುಂದೆ ಮಂಡಿಸಲು ಅವಕಾಶ ಕಲ್ಪಿಸಲಾಗಿತ್ತು. ಅರ್ಜಿಗಳ ಪರಿಶೀಲನೆ ನಡೆಸಿ ಸ್ಥಳದಲ್ಲಿಯೇ ಸಾಧ್ಯವಾದ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದರ ಜೊತೆಗೆ, ಉಳಿದ ಸಮಸ್ಯೆಗಳನ್ನು ಸಂಬಂಧಿಸಿದ ಇಲಾಖೆಗಳ ಮೂಲಕ ತ್ವರಿತವಾಗಿ ಬಗೆಹರಿಸುವ ಪ್ರಕ್ರಿಯೆ ನಡೆಯಿತು.

ಕಾರ್ಯಕ್ರಮದಲ್ಲಿ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಜನಪ್ರತಿನಿಧಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಸಮಯದ ಗೊಂದಲ; ಜನರಲ್ಲಿ ಅಸಮಾಧಾನ

ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಆಯೋಜಿಸಿದ್ದ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ ಆರಂಭದಲ್ಲೇ ಸಮಯದ ಗೊಂದಲದಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಯಿತು ಎಂಬ ಅಸಮಾಧಾನ ವ್ಯಕ್ತವಾಯಿತು. ಮಧ್ಯಾಹ್ನ 3 ಗಂಟೆಗೆ ಕಾರ್ಯಕ್ರಮ ನಡೆಯಲಿದೆ ಎಂದು ಸಾರ್ವಜನಿಕರಿಗೆ ತಿಳಿಸಲಾಗಿತ್ತು. ಆದರೆ ನಿಗದಿತ ಸಮಯಕ್ಕಿಂತ ಸುಮಾರು ಎರಡು ಗಂಟೆ ತಡವಾಗಿ ಕಾರ್ಯಕ್ರಮ ಆರಂಭವಾದ ಹಿನ್ನೆಲೆಯಲ್ಲಿ ಹಲವು ಸಾರ್ವಜನಿಕರು ಕಾದು ಕುಳಿತುಕೊಳ್ಳಬೇಕಾಯಿತು. ಸಮಯದ ಕುರಿತು ಸ್ಪಷ್ಟ ಮಾಹಿತಿ ಇಲ್ಲದ ಕಾರಣ ಜನರು ಬೇಸರ ವ್ಯಕ್ತಪಡಿಸಿದರು. ಇದರ ಜೊತೆಗೆ ಆನ್‌ಲೈನ್ ಸರ್ವರ್ ಸಮಸ್ಯೆಯಿಂದ ಅರ್ಜಿ ಸಲ್ಲಿಕೆ ಹಾಗೂ ದಾಖಲೆಗಳ ಪ್ರಕ್ರಿಯೆಯಲ್ಲಿಯೂ ಗೊಂದಲ ಉಂಟಾಯಿತು. ಈ ಕುರಿತು ಅಧಿಕಾರಿಗಳನ್ನು ಪ್ರಶ್ನಿಸಿದರೂ ಸಮರ್ಪಕ ಮಾಹಿತಿ ದೊರೆಯುತ್ತಿಲ್ಲ ಎಂಬ ಅಸಮಾಧಾನ ಸಾರ್ವಜನಿಕರಿಂದ ಕೇಳಿಬಂತು. ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆಯೂ ಸಮರ್ಪಕವಾಗಿರಲಿಲ್ಲ ಎಂದು ಕೆಲವರು ಆರೋಪಿಸಿದರು.

। ರಾಜೇಸಾಬ ಮಸಳಿ, ಸಾಮಾಜಿಕ ಕಾರ್ಯಕರ್ತ, ಜಮಖಂಡಿ

## ಭಕ್ತಿಯ ಮಾತು ಬದುಕಿಗೆ ದಾರಿದೀಪ; ನಗುವು ಮನಸ್ಸಿಗೆ ಮುದ: ಅನಿಲ ವೈದ್ಯ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಮಠ–ಮಂದಿರಗಳ ಧಾರ್ಮಿಕ ಕಾರ್ಯಕ್ರಮಗಳು ಕೇವಲ ಆಚರಣೆಗಳಿಗೆ ಸೀಮಿತವಾಗದೆ, ಮನುಷ್ಯನ ಮನಸ್ಸಿನಲ್ಲಿ ಭಕ್ತಿ, ಸಂಸ್ಕಾರ ಹಾಗೂ ಜೀವನ ಮೌಲ್ಯಗಳನ್ನು ಬೆಳೆಸುವ ಪವಿತ್ರ ವೇದಿಕೆಗಳಾಗಿವೆ ಎಂದು ಅನಿಲ ವೈದ್ಯ ಹೇಳಿದರು.

ಸಮೀಪದ ಅಬ್ಬಿಗೇರಿ ಗ್ರಾಮದ ಹಿರೇಮಠದ ಷ.ಬ್ರ. ಶ್ರೀ ಸೋಮಶೇಖರ ಶಿವಾಚಾರ್ಯರ 6ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಶನಿವಾರ ರಾತ್ರಿ ಏರ್ಪಡಿಸಿದ್ದ ನಗೆಹಬ್ಬ ಹಾಗೂ ಸಂಗೀತ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಠಗಳಿಗೆ ಆಗಮಿಸುವ ಜಗದ್ಗುರುಗಳು ಹಾಗೂ ಮಠಾಧೀಶರ ನುಡಿಗಳು ನಮ್ಮ ಬದುಕಿಗೆ ದಾರಿದೀಪವಾಗುತ್ತವೆ. ಅವರು ನೀಡುವ ಜೀವನ ಸಂದೇಶಗಳನ್ನು ಮನಸಾರೆ ಆಲಿಸಿ, ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಬದುಕು ಸಾರ್ಥಕತೆಯತ್ತ ಸಾಗುತ್ತದೆ ಎಂದರು.

ಧಾರ್ಮಿಕ ವಿಚಾರಗಳ ಮಹತ್ವವನ್ನು ತಿಳಿಸುತ್ತಲೇ ತಮ್ಮ ಹಾಸ್ಯಭರಿತ ಅನುಭವಗಳು ಹಾಗೂ ಸ್ವಾರಸ್ಯಕರ ಪ್ರಸಂಗಗಳನ್ನು ಹಂಚಿಕೊಂಡ ಅನಿಲ ವೈದ್ಯ, ತಮ್ಮ ಮಾತಿನ ಮೋಡಿಯಿಂದ ಸಭಿಕರನ್ನು ನಗೆಗಡಲಲ್ಲಿ ತೇಲಿಸಿದರು. ಗಂಭೀರ ಸಂದೇಶದ ನಡುವೆಯೂ ನಗುವಿನ ಹೊನಲು ಹರಿಸುವ ಮೂಲಕ ಕಾರ್ಯಕ್ರಮಕ್ಕೆ ವಿಶಿಷ್ಟ ಮೆರುಗು ನೀಡಿದರು.

**ವಚನಗಳು ಪಚನವಾದರೆ ಜೀವನವೇ ಬಂಗಾರ**

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ, ಜಾತ್ರಾಮಹೋತ್ಸವದ ಸಂದರ್ಭದಲ್ಲಿ ಶ್ರೀಮಠದ ಪೂಜ್ಯರಾದ ಷ.ಬ್ರ. ಶ್ರೀ ವೀರಭದ್ರ ಶಿವಾಚಾರ್ಯರು ಸಂಕಲ್ಪಿಸಿ ಆಯೋಜಿಸಿರುವ ನಗೆಹಬ್ಬ ಹಾಗೂ ಸಂಗೀತ ಕಾರ್ಯಕ್ರಮ ಶ್ಲಾಘನೀಯವಾಗಿದೆ. ನಿತ್ಯವೂ ಮಕ್ಕಳು ಹಾಗೂ ಹಿರಿಯರು ವಚನಗಳನ್ನು ಪಠಿಸುವುದರಿಂದ ಬದುಕಿನಲ್ಲಿ ಅಮೂಲ್ಯವಾದ ಬದಲಾವಣೆ ತರಲು ಸಾಧ್ಯ. "ವಚನಗಳು ಪಚನವಾದರೆ ಜೀವನವೇ ಬಂಗಾರವಾಗುತ್ತದೆ" ಎಂಬ ಅರ್ಥಪೂರ್ಣ ಸಂದೇಶ ನೀಡಿದರು.

ತಮ್ಮ ಅನುಭವದಲ್ಲಿನ ಹಾಸ್ಯ ಪ್ರಸಂಗಗಳನ್ನು ವಿವರಿಸುವ ಮೂಲಕ ಸಭಿಕರನ್ನು ನಗೆಗಡಲಲ್ಲಿ ತೇಲಿಸಿದ ಅವರು, ಸಂಸ್ಕೃತಿ ಮತ್ತು ಸಾಹಿತ್ಯದ ಜೊತೆಗೆ ಉತ್ತಮ ಮನರಂಜನೆಯೂ ಬದುಕಿಗೆ ಅಗತ್ಯವಾಗಿದೆ ಎಂದರು.




**ಜಾನಪದ ಕಲೆಗೆ ಅಬ್ಬಿಗೇರಿಯಲ್ಲಿ ಪ್ರೋತ್ಸಾಹ**

ಕಲಾವಿದ ಶಂಕ್ರಣ್ಣ ಸಂಕಣ್ಣವರ ಮಾತನಾಡಿ, ಅಬ್ಬಿಗೇರಿ ಗ್ರಾಮದಲ್ಲಿ ಕಲೆಗೆ ಸದಾ ಹೆಚ್ಚಿನ ಬೆಲೆ ಹಾಗೂ ಪ್ರೋತ್ಸಾಹ ದೊರೆಯುತ್ತಿದೆ. ಗ್ರಾಮದಲ್ಲಿ ಹಲವು ಕಾರ್ಯಕ್ರಮಗಳನ್ನು ನೀಡಿರುವುದು ಸಂತಸ ತಂದಿದೆ ಎಂದರು. ಬಳಿಕ ವಿವಿಧ ಜಾನಪದ ಗೀತೆಗಳನ್ನು ಹಾಡಿ ಸಭಿಕರನ್ನು ರಂಜಿಸಿದರು.

ಜಾನಪದದ ಹೆಸರಿನಲ್ಲಿ ಇತ್ತೀಚೆಗೆ ಕೇಳಿಬರುತ್ತಿರುವ ಅಶ್ಲೀಲ ಹಾಡುಗಳಿಗೆ ಯುವಜನತೆ ಹಾಗೂ ಮಕ್ಕಳು ಮನಸ್ಸು ಕೊಡಬಾರದು. ನಮ್ಮ ನೆಲದ ಸಂಸ್ಕೃತಿ, ಸೊಗಡನ್ನು ಸಾರುವ ಉತ್ತಮ ಜಾನಪದ ಸಾಹಿತ್ಯವನ್ನು ಉಳಿಸಿ ಬೆಳೆಸಬೇಕಾಗಿದೆ ಎಂದು ಕಿವಿಮಾತು ಹೇಳಿದರು.

**ಕಲಾವಿದರಿಗೆ ಪ್ರೋತ್ಸಾಹ ಅಗತ್ಯ:** ಷ.ಬ್ರ. ಶ್ರೀ ವೀರಭದ್ರ ಶಿವಾಚಾರ್ಯರು ಆಶೀರ್ವಚನ ನೀಡಿ, ಬೆಳಗ್ಗಿನಿಂದ ಧರ್ಮಸಭೆ, ರಥೋತ್ಸವ, ಶ್ರೀ ರೇಣುಕಾಚಾರ್ಯರು ಹಾಗೂ ಶ್ರೀಗಳ ಭಾವಚಿತ್ರಗಳ ಮೆರವಣಿಗೆ ಸೇರಿದಂತೆ ಹಲವು ಧಾರ್ಮಿಕ ಕಾರ್ಯಕ್ರಮಗಳು ನಡೆದಿವೆ. ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಭಕ್ತರಿಗೆ ಆಧ್ಯಾತ್ಮಿಕತೆಯ ಜೊತೆಗೆ ಮನರಂಜನೆಯನ್ನೂ ನೀಡುವ ಪ್ರಯತ್ನ ಮಾಡಲಾಗಿದೆ ಎಂದರು.

ನಮ್ಮ ಪರಿಸರದಲ್ಲಿಯೇ ಅನೇಕ ಪ್ರತಿಭಾವಂತ ಕಲಾವಿದರಿದ್ದಾರೆ. ಅಂತಹ ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸಿ, ಬೆಳೆಸುವ ಕಾರ್ಯಕ್ಕೆ ಸಮಾಜ ಮುಂದಾಗಬೇಕು ಎಂದು ಹೇಳಿದರು. ಬಳಿಕ ವಿವಿಧ ಕಲಾವಿದರನ್ನು ಸನ್ಮಾನಿಸಿ ಗೌರವಿಸಿದರು.

ಸಂಗೊಳ್ಳಿಯ ಪೂಜ್ಯರು, ಯಲ್ಲಾಲಿಂಗೇಶ್ವರ ಮಠದ ಬಸವರಾಜ ಶರಣರು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದು ಕಲಾವಿದರಿಗೆ ಆಶೀರ್ವದಿಸಿದರು. ಅಂದಪ್ಪ ವೀರಾಪೂರ ಕಾರ್ಯಕ್ರಮ ನಿರ್ವಹಿಸಿದರು.

## ಗದಗ ಜಿಲ್ಲೆಯಲ್ಲಿ ಭೀಕರ ಬರ: ರೈತರ ನೆರವಿಗೆ ಎಲ್ಲ ಪಕ್ಷಗಳ ನಾಯಕರು ಮುಂದಾಗಲಿ: ಕೃಷಿಕ ಪರಮೇಶ್ವರಪ್ಪ ಜಂತ್ಲಿ ಆಗ್ರಹ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ಗದಗ ಜಿಲ್ಲೆಯಲ್ಲಿ ಬರ ಪರಿಸ್ಥಿತಿ ತೀವ್ರವಾಗಿದ್ದು, ರೈತರು ತಮ್ಮ ದನ–ಕರುಗಳಿಗೆ ನೀರು ಹಾಗೂ ಮೇವು ಒದಗಿಸುವುದರ ಜೊತೆಗೆ ಮುಂದಿನ ಬೆಳೆಗಾಗಿ ಬೀಜ ಬಿತ್ತುವುದು ಹೇಗೆ ಎಂಬ ಆತಂಕದಲ್ಲಿದ್ದಾರೆ. ಇಂತಹ ಸಂಕಷ್ಟದ ಸಂದರ್ಭದಲ್ಲಿ ರೈತರ ನೆರವಿಗೆ ಎಲ್ಲ ರಾಜಕೀಯ ಪಕ್ಷಗಳ ನಾಯಕರು ಒಗ್ಗಟ್ಟಾಗಿ ಮುಂದೆ ಬರಬೇಕು ಎಂದು ಕೃಷಿಕ ಪರಮೇಶ್ವರಪ್ಪ ಪರಪ್ಪ ಜಂತ್ಲಿ ಆಗ್ರಹಿಸಿದ್ದಾರೆ.

ರೈತರಿಗೆ ಸಂಕಷ್ಟ ಎದುರಾದ ಸಂದರ್ಭದಲ್ಲಿ ಅವರ ಪರವಾಗಿ ಧ್ವನಿ ಎತ್ತುವುದು ಹಾಗೂ ಅಗತ್ಯ ನೆರವು ಒದಗಿಸುವುದು ಎಲ್ಲ ಜನಪ್ರತಿನಿಧಿಗಳು ಮತ್ತು ರಾಜಕೀಯ ಪಕ್ಷಗಳ ಜವಾಬ್ದಾರಿಯಾಗಿದೆ.

**ಎಲ್ಲ ರಾಜಕೀಯ ಪಕ್ಷಗಳ ನಾಯಕರು ರೈತರ ನೆರವಿಗೆ ಬರಲು ಆಗ್ರಹ**

ಆದರೆ ಪ್ರಸ್ತುತ ಕೆಲವರು ರೈತರ ಸಮಸ್ಯೆಗಳ ಬದಲಾಗಿ ರಾಜಕೀಯ ಆರೋಪ–ಪ್ರತ್ಯಾರೋಪಗಳಲ್ಲಿ ತೊಡಗಿರುವುದು ಸರಿಯಲ್ಲ ಎಂದು ಅವರು ಹೇಳಿದ್ದಾರೆ.

ಗದಗ–ಬೆಟಗೇರಿ ಅವಳಿ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸಚಿವ ಎಚ್.ಕೆ. ಪಾಟೀಲರ ನೇತೃತ್ವದಲ್ಲಿ ಕೈಗೊಳ್ಳಲಾಗಿರುವ ವಿವಿಧ ಕ್ರಮಗಳನ್ನು ಸ್ಥಳೀಯ ಜನರು ಗಮನಿಸಿದ್ದಾರೆ. ಇಂತಹ ಅಭಿವೃದ್ಧಿ ಹಾಗೂ ಜನೋಪಯೋಗಿ ಕಾರ್ಯಗಳ ಕುರಿತು ವಾಸ್ತವಾಂಶಗಳನ್ನು ತಿಳಿದುಕೊಂಡು ಮಾತನಾಡಬೇಕು. ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಜನರ ಹಾಗೂ ರೈತರ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡಬೇಕು ಎಂದು ಜಂತ್ಲಿ ತಿಳಿಸಿದ್ದಾರೆ.

ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರವಾಗಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಸೇರಿದಂತೆ ಎಲ್ಲ ರಾಜಕೀಯ ಪಕ್ಷಗಳ ನಾಯಕರು ಒಗ್ಗೂಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಮೇಲೆ ಅಗತ್ಯ ಒತ್ತಡ ತಂದು ರೈತರಿಗೆ ಬರ ಪರಿಹಾರ, ಜಾನುವಾರುಗಳಿಗೆ ಮೇವು ಮತ್ತು ನೀರು ಸೇರಿದಂತೆ ಅಗತ್ಯ ನೆರವು ದೊರಕಿಸುವಂತೆ ಕ್ರಮ ಕೈಗೊಳ್ಳಬೇಕು. ರೈತರ ಸಂಕಷ್ಟದ ಸಂದರ್ಭದಲ್ಲಿ ಚಿಲ್ಲರೆ ರಾಜಕೀಯಕ್ಕೆ ಅವಕಾಶ ನೀಡಬಾರದು ಎಂದು ಅವರು ಮನವಿ ಮಾಡಿದ್ದಾರೆ.

ರೈತರು ಮತ್ತು ಜಾನುವಾರುಗಳ ಸಂಕಷ್ಟವನ್ನು ಅರಿತು ತುರ್ತಾಗಿ ನೆರವು–ಸಹಕಾರ ನೀಡಲು ಎಲ್ಲ ಪಕ್ಷಗಳ ನಾಯಕರು ಮುಂದಾಗಬೇಕು. ರೈತರ ಸಮಸ್ಯೆಗಳನ್ನು ನಿರ್ಲಕ್ಷಿಸದೆ ಸರ್ಕಾರದ ಗಮನಕ್ಕೆ ತಂದು ಪರಿಹಾರ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಗದಗ ನಗರದ ಭೀಷ್ಮ ಕೆರೆಯನ್ನು ಸಮಗ್ರವಾಗಿ ಹೂಳೆತ್ತಿ, ಹೆಚ್ಚಿನ ಪ್ರಮಾಣದಲ್ಲಿ ನೀರು ಸಂಗ್ರಹಿಸುವ ಸಾಮರ್ಥ್ಯವನ್ನು ಹೆಚ್ಚಿಸಬೇಕು. ತುಂಗಭದ್ರಾ ನೀರನ್ನು ಸಮರ್ಪಕವಾಗಿ ಸಂಗ್ರಹಿಸುವ ಮೂಲಕ ನಗರದ ಸಾರ್ವಜನಿಕರು ಹಾಗೂ ಸುತ್ತಮುತ್ತಲಿನ ರೈತರಿಗೆ ಅನುಕೂಲವಾಗುವಂತೆ ಶಾಶ್ವತ ನೀರಿನ ವ್ಯವಸ್ಥೆ ಕಲ್ಪಿಸುವ ಕುರಿತು ಕ್ರಮ ಕೈಗೊಳ್ಳಬೇಕು ಎಂದು ಪರಮೇಶ್ವರಪ್ಪ ಜಂತ್ಲಿ ಆಗ್ರಹಿಸಿದ್ದಾರೆ.

ರೈತರ ಹಿತದೃಷ್ಟಿಯಿಂದ ತಕ್ಷಣವೇ ಅಗತ್ಯ ಕ್ರಮ ಕೈಗೊಂಡು ಬರದ ಸಂಕಷ್ಟದಿಂದ ರೈತರನ್ನು ರಕ್ಷಿಸಬೇಕು ಎಂದು ಅವರು ತಿಳಿಸಿದ್ದಾರೆ.

SATYAMITHI KANNADA DAILY MORNING OWNER, PUBLISHER, BY: CHANNAVEERAPPA NINGAPPA SAMAGANDI PUBLISHED FROM: KELAGAL{ETH, NEAR BASAVESHWAR DEVASTAN, HOME NO. 169, WARD NO, 4 MAIN ROAD GAJEDRAGAD, GADAG KARNATAKA - 582114 PRINTED AT: MAILARALINGESHWAR PRINTERS, WARD NO, 3, SUDI TQ, GAJENDRAGAD, GADAG, KARNATAKA- 582114